ವಿಜಯಪುರ | ಸಂಪುಟ 04 | ಸಂಚಿಕೆ 126 | ಪುಟ 04 | ₹ 3.00

https://udayarashminews.com


udayarashmi 90088 88340

# ಉದಯ ರಶ್ಮಿ

Udayarashmi Kannada Daily ಜನಪರ-ಜೀವಪರ ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ Editor: Indushekhar Manur

editor.udayarashmi@gmail.com RNI NO: KARKAN/2023/86203 ಬುಧವಾರ, ಜುಲೈ, 08, 2026



"ಅಯೋಧ್ಯೆಯ ರಾಮ ಮಂದಿರದ ಹೆಸರಿನಲ್ಲಿ 20 ಸಾವಿರ ಕೋಟಿ ರೂಪಾಯಿಗೂ ಹೆಚ್ಚು ಮೌಲ್ಯದ ಹಣ ಮತ್ತು ಆಸ್ತಿಯನ್ನು ಲೂಟಿ ಮಾಡಲಾಗಿದ್ದು, ಈ ಲೂಟಿಯಲ್ಲಿ ಬಡವರು, ದಲಿತರು ಅಥವಾ ರೈತರು ಭಾಗಿಯಾಗಿಲ್ಲ, ಆರ್‌ಎಸ್‌ಎಸ್, ಬಿಜೆಪಿ ಮತ್ತು ಅವರ ಬೆಂಬಲಿಗರೇ ಇದಕ್ಕೆ ಕಾರಣ."

■ ಮಲ್ಲಿಕಾರ್ಜುನ ಖರ್ಗೆ
ಎಐಸಿಸಿ ಅಧ್ಯಕ್ಷರು ಹಾಗೂ ರಾಜ್ಯಸಭೆ ಪ್ರತಿಪಕ್ಷ ನಾಯಕರು

## ಎಸ್‌ಐಆರ್ ನೆಪದಲ್ಲಿ ಮತದಾರರ ಹಕ್ಕು ಕಸಿವ ಕುತಂತ್ರ



■ ಉದಯರಶ್ಮಿ ದಿನಪತ್ರಿಕೆ

### ಅರ್ಹ ಮತದಾರರ ಹೆಸರು ಕೈಬಿಡದಂತೆ ಎಚ್ಚರ ವಹಿಸಲು ಕರೆ । ಶಾಸಕ ವಿಠ್ಠಲ ಕಟಕಧೋಂಡ ಆರೋಪ

ಚಡಚಣ: ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ನೆಪದಲ್ಲಿ ಅರ್ಹ ಮತದಾರರ ಹೆಸರುಗಳನ್ನು ಪಟ್ಟಿಯಿಂದ ಕೈಬಿಡುವ ಮೂಲಕ ಬಿಜೆಪಿ ಸರ್ಕಾರ ಉದ್ದೇಶಪೂರ್ವಕವಾಗಿ ರಾಜಕೀಯ ಕುತಂತ್ರ ನಡೆಸುತ್ತಿದೆ. ಪ್ರಜಾಪ್ರಭುತ್ವದ ಮೂಲ ಹಕ್ಕಾದ ಮತದಾನದ ಹಕ್ಕನ್ನು ಯಾರೂ ಕಸಿದುಕೊಳ್ಳದಂತೆ ಕಾಂಗ್ರೆಸ್ ಕಾರ್ಯಕರ್ತರು ಜಾಗರೂಕರಾಗಿ ಕಾರ್ಯನಿರ್ವಹಿಸಬೇಕು ಎಂದು ನಾಗಠಾಣ ಮತಕ್ಷೇತ್ರದ ಶಾಸಕ ವಿಠ್ಠಲ ಕಟಕಧೋಂಡ ಕರೆ ನೀಡಿದರು.

ಪಟ್ಟಣದ ಅಂಜುಮನ್ ಇಸ್ಲಾಂ ಕಮಿಟಿಯ ಶಾದಿ ಮಹಲ್‌ನಲ್ಲಿ ಸೋಮವಾರ ನಡೆದ ನಾಗಠಾಣ ಮತಕ್ಷೇತ್ರದ ಚಡಚಣ ಬ್ಲಾಕ್ ಕಾಂಗ್ರೆಸ್ ಬಿಎಲ್‌ಎ ಗಳ (ಬೂತ್ ಲೆವೆಲ್ ಏಜೆಂಟ್) ತರಬೇತಿ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಭಾರತದ ಸಂವಿಧಾನ ಶಿಲ್ಪಿ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರು ಪ್ರತಿಯೊಬ್ಬ ನಾಗರಿಕನಿಗೂ ಮತದಾನದ ಹಕ್ಕು ನೀಡಿದ್ದಾರೆ. ದೇಶದ ವಿವಿಧ ರಾಜ್ಯಗಳಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ನಡೆಯುತ್ತಿರುವ ಸಂದರ್ಭದಲ್ಲಿ ಕರ್ನಾಟಕದ ಮೇಲೆ ಬಿಜೆಪಿ ವಿಶೇಷ ಗಮನ ಹರಿಸಿದೆ. ಅರ್ಹ ಮತದಾರರ ಹೆಸರುಗಳು ಯಾವುದೇ ಕಾರಣಕ್ಕೂ ಪಟ್ಟಿಯಿಂದ ಕೈಬಿಡದಂತೆ ಬಿಎಲ್‌ಎ ಗಳು ಮನೆಮನೆಗೆ ತೆರಳಿ ಪರಿಶೀಲನೆ ನಡೆಸಬೇಕು. ರಾಜಕೀಯ ದುರುದ್ದೇಶದಿಂದ ಮುಗ್ಧ ಮತದಾರರು ತಮ್ಮ ಹಕ್ಕಿನಿಂದ ವಂಚಿತರಾಗದಂತೆ ಎಲ್ಲರೂ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು" ಎಂದು ಅವರು ಹೇಳಿದರು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಲೋಣಿ ಮಾತನಾಡಿ, ಎಸ್‌ಐಆರ್ ಪ್ರಕ್ರಿಯೆಯ ಹೆಸರಿನಲ್ಲಿ ಬಿಜೆಪಿ ಸರ್ಕಾರ ತನ್ನ ರಾಜಕೀಯ ಕುತಂತ್ರವನ್ನು ಮುಂದುವರಿಸಿದೆ. ಕಾಂಗ್ರೆಸ್ ಪಕ್ಷವನ್ನು ಸಂಘಟನಾತ್ಮಕವಾಗಿ ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ರಾಜ್ಯಾದ್ಯಂತ ಇಂತಹ ತರಬೇತಿ ಶಿಬಿರಗಳನ್ನು ಆಯೋಜಿಸಲಾಗುತ್ತಿದೆ ಎಂದು ಹೇಳಿದರು.

ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಸುರೇಶಗೌಡ ಪಾಟೀಲ ಮಾತನಾಡಿ, ಶಿಕ್ಷಣ ಇಲಾಖೆಯ ವತಿಯಿಂದ ನೇಮಕಗೊಂಡಿರುವ ಬಿಎಲ್‌ಓ ಗಳೊಂದಿಗೆ ಕಾಂಗ್ರೆಸ್ ಬಿಎಲ್‌ಎ ಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಕರೆ ನೀಡಿದರು.

ಜಿಲ್ಲಾ ಕಾಂಗ್ರೆಸ್ ಮುಖಂಡ ಡಿ. ಎಲ್. ಚವ್ಹಾಣ ಮಾತನಾಡಿ, ಎಲ್ಲ ರಾಜಕೀಯ ಪಕ್ಷಗಳ ಬಿಎಲ್‌ಎಗಳು ಮತ್ತು ಸರ್ಕಾರದ ಅಧಿಕಾರಿಗಳು ಪರಸ್ಪರ ಸಹಕಾರದಿಂದ ಪಾರದರ್ಶಕ ಮತದಾರರ ಪಟ್ಟಿ ಪರಿಷ್ಕರಣೆಗೆ ಶ್ರಮಿಸಬೇಕು ಎಂದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಆರ್. ಡಿ. ಹಕ್ಕಿ ಮಾತನಾಡಿ, ಸರ್ಕಾರದ ಪರವಾಗಿ ಕಾರ್ಯನಿರ್ವಹಿಸುವ ಬಿಎಲ್‌ಒಗಳ ಕೆಲಸದಲ್ಲಿ ಯಾವುದೇ ಲೋಪದೋಷಗಳಾಗದಂತೆ ಪಕ್ಷದ ಕಾರ್ಯಕರ್ತರು ನಿಗಾ ವಹಿಸಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಪಟ್ಟಣ ಪಂಚಾಯಿತಿ ಉಪಾಧ್ಯಕ್ಷ ಇಲಾಯಿ ನದಾಫ್, ಸುರೇಶ ಗೊಣಸಗಿ, ಸೋಮು ಕತ್ನಾಳಿ, ಸಂತೋಷ ಪಾಟೀಲ, ಸಾಹೇಬಗೌಡ ಬಿರಾದಾರ, ಕುತ್ಬುದ್ದಿನ್ ಪಟೇಲ್, ಮುರ್ತುಜಾ ನದಾಫ್, ದೇವಪ್ಪಗೌಡ ಪಾಟೀಲ, ದಯಾನಂದ ಪಾಟೀಲ, ದಶರಥ ಬನಸೋಡೆ, ಮಹಾದೇವ ಬನಸೋಡೆ, ಕಾಮೇಶ ಪಾಟೀಲ, ಶಿವಾಜಿ ವಾಲಿಕಾರ, ರವಿ ಬಿರಾದಾರ, ದಾನಮ್ಮ ಪಾಟೀಲ, ನಾಗೇಶ ಗಾಯಕವಾಡ, ಸಿದ್ದಲಿಂಗ ಬನಸೋಡೆ ಸೇರಿದಂತೆ ಬ್ಲಾಕ್ ಕಾಂಗ್ರೆಸ್‌ನ ಹಿರಿಯ ಮುಖಂಡರು, ಬಿಎಲ್‌ಎ ಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## 7ನೇ ರಾಷ್ಟ್ರೀಯ ಹೆದ್ದಾರಿ ಮಾರ್ಚ್‌ಗೆ ಪೂರ್ಣ : ಸಂಸದ ಜಿಗಜಿಣಗಿ



■ ಉದಯರಶ್ಮಿ ದಿನಪತ್ರಿಕೆ

### ಮಹಾರಾಷ್ಟ್ರದ ಮುರಮ್ ನಿಂದ ವಿಜಯಪುರ ಹೆದ್ದಾರಿ । 957.09 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣ

ವಿಜಯಪುರ: 957.09 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣಗೊಳ್ಳುತ್ತಿರುವ ವಿಜಯಪುರ ನಗರಕ್ಕೆ 7ನೇ ರಾಷ್ಟ್ರೀಯ ಹೆದ್ದಾರಿ 2027ರ ಮಾರ್ಚ್‌ಗೆ ಪೂರ್ಣಗೊಂಡು ಸಂಚಾರಕ್ಕೆ ಮುಕ್ತವಾಗಲಿದೆ ಎಂದು ಸಂಸದ ರಮೇಶ ಜಿಗಜಿಣಗಿ ತಿಳಿಸಿದರು.

ನಿರ್ಮಾಣ ಹಂತದಲ್ಲಿರುವ ಈ ರಾಷ್ಟ್ರೀಯ ಹೆದ್ದಾರಿಗೆ ಸಂಬಂಧಿಸಿದಂತೆ ವಿವಿಧ ಕ್ಷೇತ್ರಗಳನ್ನು ವೀಕ್ಷಿಸಿ ಸಂಬಂಧಿಸಿದ ಅಭಿಯಂತರ ಜೊತೆ ಚರ್ಚೆ ನಡೆಸಿದ ಬಳಿಕ ಸಂಸದರು ಈ ವಿಷಯವನ್ನು ತಿಳಿಸಿದರು.

ನೆರೆಯ ಮಹಾರಾಷ್ಟ್ರ ರಾಜ್ಯದ ಮುರುಮ್ ನಿಂದ ವಿಜಯಪುರದ ಸುಭಾಷ್ ಚಂದ್ರ ಬೋಸ್ ವೃತ್ತದವರೆಗೆ ನಿರ್ಮಾಣಗೊಳ್ಳುತ್ತಿರುವ ಈ ಹೊಸ ರಾಷ್ಟ್ರೀಯ ಹೆದ್ದಾರಿ (ಎನ್ ಎಚ್ 548ಬಿ)ಯ ಕಾಮಗಾರಿ ಶೇ. 65ರಷ್ಟು ಪೂರ್ಣಗೊಂಡಿದ್ದು, ಬಾಕಿ ಕಾಮಗಾರಿ ಪ್ರಗತಿಯಲ್ಲಿದ್ದು, ಮಾರ್ಚ್ 2027ಕ್ಕೆ ಪೂರ್ಣಗೊಳ್ಳಲಿದೆ ಎಂದು ಸಂಸದರು ತಿಳಿಸಿದ್ದಾರೆ.

2025 ಜನವರಿ 16 ರಂದು ಕಾರ್ಯಾರಂಭವಾಗಿದ್ದ ಈ ಹೆದ್ದಾರಿ ಕಾಮಗಾರಿ ಎರಡು ವರ್ಷದಲ್ಲಿ ಪೂರ್ಣಗೊಳ್ಳಬೇಕಿತ್ತು. ಆದರೆ ಕಾರಣಾಂತರಗಳಿಂದ ಅದು 2027ರ ಮಾರ್ಚ್ ನಲ್ಲಿ ಪೂರ್ಣಗೊಳ್ಳಲಿದೆ ಎಂದವರು ತಿಳಿಸಿದ್ದಾರೆ.

ಮಹಾರಾಷ್ಟ್ರದ ಮುರಮ್ ನಿಂದ ಐಬಿ ವೃತ್ತದವರೆಗೆ 1,02,303

ಕಿಮೀ. ಉದ್ದದ ಈ ರಾಷ್ಟ್ರೀಯ ಹೆದ್ದಾರಿಗೆ ಒಟ್ಟು 957.09 ಕೋಟಿ ರೂ. ಮಂಜೂರಾಗಿದೆ.

ಮಹಾರಾಷ್ಟ್ರದ ಕರಜಗಿ, ಮಾಶ್ಯಾಳ, ಇಂಡಿ, ರೂಗಿ, ಅಥರ್ಗಾ ಹಾಗೂ ನಾಗಠಾಣ ಸೇರಿದಂತೆ 7 ಬೈಪಾಸ್ ಮೂಲಕ ಈ ಹೆದ್ದಾರಿ ನಿರ್ಮಾಣಗೊಳ್ಳುತ್ತಿದೆ.

ಈ ಹೆದ್ದಾರಿಯುದ್ದಕ್ಕೂ ನಾಲ್ಕು ಬೃಹತ್ ಸೇತುವೆಗಳೊಟ್ಟಿಗೆ, ಒಂದು ರೈಲ್ವೆ ಮೇಲ್ಸೇತುವೆ ನಿರ್ಮಾಣಗೊಳ್ಳಲಿದೆ. ಶೇ. 65ರಷ್ಟು ಕಾಮಗಾರಿ ಪೂರ್ಣಗೊಂಡಿದೆ. ಬಾಕಿ ಕಾಮಗಾರಿ ಭರದಿಂದ ಸಾಗಿದೆ ಎಂದು ತಿಳಿಸಿದ ಅವರು, ಈ ಹೆದ್ದಾರಿ, ವಿಜಯಪುರ ನಗರಕ್ಕೆ 7 ನೇ ರಾಷ್ಟ್ರೀಯ ಹೆದ್ದಾರಿಯಾಗಿ ಪರಿವರ್ತನೆಗೊಳ್ಳಲಿದೆ ಎಂದವರು ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ವಿಭಾಗದ ಕಾರ್ಯಪಾಲಕ ಅಭಿಯಂತರ ವಿಜಯ ಪಾಟೀಲ, ಯೋಜನಾ ವ್ಯವಸ್ಥಾಪಕ ಮಾರುತಿರಾವ್ ಶಿಂದೆ, ಸಹಾಯಕ ಕಾರ್ಯಪಾಲಕ ಅಭಿಯಂತರ ವಿವೇಕ ಮಠ ಬಿಜೆಪಿ ಜಿಲ್ಲಾ ಮಾಧ್ಯಮ ಸಂಚಾಲಕ ವಿಜಯ ಜೋಶಿ ಮತ್ತಿತರರು ಇದ್ದರು.

# ಬರ: ನಿರ್ಲಕ್ಷ್ಯ ತೋರುವ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ

### ಕಲ್ಬುರ್ಗಿ ವಿಭಾಗ ಮಟ್ಟದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಸಿಎಂ ಡಿ.ಕೆ ಶಿವಕುಮಾರ್ ಅಧಿಕಾರಿಗಳಿಗೆ ಎಚ್ಚರಿಕೆ



ಕಲಬುರಗಿ: ರಾಜ್ಯವನ್ನು ಕಾಡುತ್ತಿರುವ ಬರಗಾಲ ಪರಿಸ್ಥಿತಿ ನಿರ್ವಹಣೆಯಲ್ಲಿ ನಿರ್ಲಕ್ಷ್ಯ ತೋರುವ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಸಿಎಂ ಡಿ ಕೆ ಶಿವಕುಮಾರ್ ಎಚ್ಚರಿಕೆ ನೀಡಿದ್ದಾರೆ.

ಕಲ್ಬುರ್ಗಿ ವಿಭಾಗ ಮಟ್ಟದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಂಗಳವಾರ ಪ್ರಾಸ್ತಾವಿಕ ಭಾಷಣ ಮಾಡಿದ ಸಿಎಂ ಅವರು, ಜನಪರ ಕೆಲಸ ಮಾಡದ ಅಧಿಕಾರಿಗಳನ್ನು ಸಹಿಸಿಕೊಳ್ಳುವುದಿಲ್ಲ ಎಂದರು. ಉತ್ತರ ಕರ್ನಾಟಕದ ಮೊದಲ ವಿಭಾಗ ಮಟ್ಟದ ಪ್ರಗತಿ ಪರಿಶೀಲನಾ ಸಭೆ ಕಲಬುರಗಿಯಲ್ಲಿ ಆಯೋಜಿಸಲಾಗಿತ್ತು.

ಸರ್ವರನ್ನೂ ಒಳಗೊಂಡ ಪರಿಶುದ್ಧ ಆಡಳಿತ, ಅಭಿವೃದ್ಧಿ ಮತ್ತು ಕಟ್ಟಕಡೆಯ ವ್ಯಕ್ತಿಗೂ ಅವರ ನಾಗರಿಕ ಹಕ್ಕುಗಳನ್ನು ತಲುಪಿಸುವುದು ನನ್ನ ಸರ್ಕಾರದ ಪ್ರಮುಖ ಗುರಿ. ಈ ಗುರಿ ಸಾಧಿಸಲು ಅಧಿಕಾರಿ ವರ್ಗ ಅತ್ಯಂತ ಕ್ರಿಯಾಶೀಲ, ಜನಪರ ಮತ್ತು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು" ಎಂದು ತಿಳಿಸಿದರು.

ನಾನು ಬಸವಾದಿ ಶರಣರ ಸಮಾನತೆಯ ತತ್ವವನ್ನು ನಂಬುವವನು. ಆದ್ದರಿಂದಲೇ ನನ್ನ ಮೊದಲ ಉತ್ತರ ಕರ್ನಾಟಕ ಪ್ರವಾಸವನ್ನು ಬಸವಕಲ್ಯಾಣದಿಂದ ಆರಂಭಿಸಿದ್ದೇನೆ. ಸಮಾನತೆ, ಸಾಮಾಜಿಕ ನ್ಯಾಯ ಮತ್ತು ಅಭಿವೃದ್ಧಿ ಒಂದೇ ವೇಗದಲ್ಲಿ ಸಾಗಬೇಕು" ಎಂದು ಹೇಳಿದರು.

ಬೀದರ್, ಕಲ್ಬುರ್ಗಿ ಜಿಲ್ಲೆಯ ಜನತೆ ನೀಡಿರುವ ಅಭೂತಪೂರ್ವ ಬೆಂಬಲ, ಪ್ರೀತಿ ಮತ್ತು ವಿಶ್ವಾಸಕ್ಕೆ ಕೃತಜ್ಞತೆ ಸಲ್ಲಿಸಿದ ಅವರು, "ಜನತೆ ನಮ್ಮ ಮೇಲೆ ಇಟ್ಟಿರುವ ನಂಬಿಕೆಯೇ ನಮ್ಮ ಜವಾಬ್ದಾರಿಯನ್ನು ಹೆಚ್ಚಿಸಿದೆ. ನಮ್ಮನ್ನು ಈ ಸ್ಥಾನದಲ್ಲಿ ಕೂರಿಸಿರುವವ ಜನತೆಯ ನಿರೀಕ್ಷೆಗೆ ತಕ್ಕಂತೆ ಕೆಲಸ ಮಾಡುವುದು ನಮ್ಮೆಲ್ಲರ ಕರ್ತವ್ಯ" ಎಂದರು.

"ನಿಮ್ಮ ಕಾರ್ಯಕ್ಷಮತೆ ಉತ್ತಮವಾಗಿದ್ದರೆ ನಾಡಿನ ಜನತೆಯ ಋಣ ತೀರಿಸಿದಂತಾಗುತ್ತದೆ. ಆದರೆ ಜನಪರವಾಗಿ ಕೆಲಸ ಮಾಡದಿದ್ದರೆ ನಿಮ್ಮ ವಿರುದ್ಧ ಕ್ರಮ ಕೈಗೊಳ್ಳುವುದು ನನಗೆ ಅನಿವಾರ್ಯವಾಗುತ್ತದೆ" ಎಂದು ಅವರು ಎಚ್ಚರಿಕೆ ನೀಡಿದರು.

### ಅಂತರರಾಜ್ಯ ನೀರಿನ ಸಮಸ್ಯೆಗಳಿಗೆ ಶಾಶ್ವತ ಪರಿಹಾರ



ರಾಜ್ಯದ ಅಭಿವೃದ್ಧಿ ಮತ್ತು ನೀರಿನ ನಿರ್ವಹಣೆ ಕುರಿತು ಮಾತನಾಡಿದ ಅವರು, "ದೇಶಾದ್ಯಂತ ಮಳೆಯ ಅಭಾವದ ಬಗ್ಗೆ ಆತಂಕ ವ್ಯಕ್ತವಾಗುತ್ತಿದೆ. ರಾಜ್ಯದ ಪರಿಸ್ಥಿತಿ ಸಮಾಧಾನಕರವಾಗಿದೆ. ಅಂತರರಾಜ್ಯ ನೀರಿನ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳುವ ಉದ್ದೇಶದಿಂದ ತೆಲಂಗಾಣ ಮತ್ತು ಆಂಧ್ರ ಪ್ರದೇಶದ ಮುಖ್ಯಮಂತ್ರಿಗಳು ಹಾಗೂ ಕೇಂದ್ರ ಸಚಿವರೊಂದಿಗೆ ಐತಿಹಾಸಿಕ ಮಟ್ಟದ ಚರ್ಚೆ ನಡೆಸಿದ್ದೇವೆ. ಕೃಷ್ಣ, ಕಾವೇರಿ ಮತ್ತು ಗೋದಾವರಿ ನದಿಗಳ ಜೋಡಣೆ ಯೋಜನೆಯನ್ನು ಸುಮಾರು ಒಂದು ಲಕ್ಷ ಕೋಟಿ ರೂಪಾಯಿ ವೆಚ್ಚದಲ್ಲಿ ಮುಂದುವರಿಸುವ ಪ್ರಸ್ತಾವನೆಗೆ ಕೇಂದ್ರ ಸರ್ಕಾರವೂ ಸಕಾರಾತ್ಮಕ ಸ್ಪಂದನೆ ನೀಡಿದೆ. ರಾಜಕೀಯ ಭಿನ್ನಾಭಿಪ್ರಾಯಗಳನ್ನು ಮೀರಿ ರಾಜ್ಯದ ಜನರ ಹಿತಾಸಕ್ತಿ ರಕ್ಷಣೆ ಆದ್ಯತೆಯಾಗಿಸಿ ಒಟ್ಟಾಗಿ ಕೆಲಸ ಮಾಡಲು ತೀರ್ಮಾನಿಸಿದ್ದೇವೆ" ಎಂದರು.

### ಮತದಾನದ ಹಕ್ಕು ರಕ್ಷಿಸುವುದು ಸರ್ಕಾರದ ಜವಾಬ್ದಾರಿ

ಮತದಾರರ ಪಟ್ಟಿಯ ಪರಿಷ್ಕರಣೆ ಕುರಿತು ಮಾತನಾಡಿದ ಮುಖ್ಯಮಂತ್ರಿಯವರು, "ಒಬ್ಬನೇ ಒಬ್ಬ ಅರ್ಹ ಮತದಾರ ತನ್ನ ಮತದಾನದ ಹಕ್ಕು ಕಳೆದುಕೊಳ್ಳಬಾರದು. ಇಲ್ಲಿ ರಾಜಕಾರಣ ಮುಖ್ಯವಲ್ಲ, ಆದರೆ ಪ್ರತಿಯೊಬ್ಬ ನಾಗರಿಕನ ಮತದಾನದ ಹಕ್ಕು ರಕ್ಷಿಸುವುದು ಸರ್ಕಾರದ ಜವಾಬ್ದಾರಿ. ಬಿಎಲ್‌ಒಗಳು ಪ್ರತಿಯೊಂದು ಮನೆಗೆ ಕನಿಷ್ಠ ಮೂರು ಬಾರಿ ಭೇಟಿ ನೀಡಿ ಅರ್ಹ ಮತದಾರರ ಹೆಸರನ್ನು ಉಳಿಸುತ್ತಾರೆಯೇ ಎಂಬುದರ ಮೇಲೆ ನಿಗಾ ವಹಿಸಬೇಕು. ಈ ವಿಚಾರದಲ್ಲಿ ಯಾವುದೇ ರಾಜಿ ಪ್ರಶ್ನೆಯೇ ಇಲ್ಲ" ಎಂದು ಸೂಚಿಸಿದರು.

## 12 ವರ್ಷಗಳಿಂದ ತಲೆಮರೆಸಿಕೊಂಡಿದ್ದ ನಕಲಿ ಡಿಎಸ್‌ಪಿ ಬಂಧನ

■ ಉದಯರಶ್ಮಿ ದಿನಪತ್ರಿಕೆ





ವಿಜಯಪುರ: ತಾನು ಡಿಎಸ್‌ಪಿ ಎಂದು ಹೇಳಿಕೊಂಡು ಖಾಕಿ ಸಮವಸ್ತ್ರ ಧರಿಸಿ ನಿರುದ್ಯೋಗಿ ಯುವಕರಿಗೆ ಪೊಲೀಸ್ ಹಾಗೂ ಪಿಎಸ್‌ಐ ಸೇರಿದಂತೆ ವಿವಿಧ ಸರ್ಕಾರಿ ಉದ್ಯೋಗ ಕೊಡಿಸುವುದಾಗಿ ನಂಬಿಸಿ ಲಕ್ಷಾಂತರ ರೂಪಾಯಿ ವಂಚನೆ ನಡೆಸಿದ ಆರೋಪದಲ್ಲಿ ಸುಮಾರು 12 ವರ್ಷಗಳಿಂದ ತಲೆಮರೆಸಿಕೊಂಡಿದ್ದ ಆರೋಪಿಯನ್ನು ವಿಜಯಪುರ ಜಿಲ್ಲಾ ಪೊಲೀಸರು ಬೆಂಗಳೂರಿನಲ್ಲಿ ಬಂಧಿಸಿದ್ದಾರೆ.

ಬಂಧಿತನನ್ನು ಗ್ಯಾನನಗೌಡ @ ಜ್ಞಾನಗೌಡ @ ಗಣೇಶ @ ಸಿ. ಸಂಪತ್‌ಕುಮಾರ (31), ವರಗೋಡದಿನ್ನಿ ಗ್ರಾಮ, ಹುನಗುಂದ ತಾಲೂಕು, ಬಾಗಲಕೋಟೆ ಜಿಲ್ಲೆ ಎಂದು ಗುರುತಿಸಲಾಗಿದೆ.

ಪೊಲೀಸರ ಮಾಹಿತಿ ಪ್ರಕಾರ, 2014ರ ಮಾರ್ಚ್ 29ರಂದು ವಿಜಯಪುರ ಎಪಿಎಂಸಿ ಪೊಲೀಸ್ ಠಾಣೆಯಲ್ಲಿ ಅಪಹರಣ, ಕೊಲೆ ಯತ್ನ ಹಾಗೂ ವಂಚನೆ ಪ್ರಕರಣ ದಾಖಲಾಗಿತ್ತು. 2012ರಲ್ಲಿ ಕಾಖಂಡಕಿ ಗ್ರಾಮದ ವಿಠ್ಠಲ ಛಾಯಾಗೋಳ ಅವರ ಸಂಬಂಧಿಕನಿಗೆ ಪೊಲೀಸ್ ಉದ್ಯೋಗ ಕೊಡಿಸುವುದಾಗಿ ಹೇಳಿ ಆರೋಪಿಯು ಸುಮಾರು ರೂ. 1.20 ಲಕ್ಷ ಪಡೆದುಕೊಂಡಿದ್ದನು. ಬಳಿಕ ಉದ್ಯೋಗ ಕೊಡಿಸದೇ ಹಣ ವಾಪಸ್ ಕೇಳಿದಾಗ, ದೂರುದಾರನನ್ನು ಕಾರಿನಲ್ಲಿ ಅಪಹರಿಸಿ, ಹಲ್ಲೆ ನಡೆಸಿ, ಕೊಪ್ಪಳ ಜಿಲ್ಲೆಯ ಮುನಿರಾಬಾದ್ ಸಮೀಪದ ಹುಲಗಿ ಗ್ರಾಮದ ಕಾಲುವೆಯಲ್ಲಿ ಕೈಗಳಿಗೆ ಬೇಡಿ ಹಾಕಿ, ಕಾಲು ಕಟ್ಟಿ ಗೋಣಿಚೀಲದಲ್ಲಿ ಹಾಕಿ ನೀರಿಗೆ ಎಸೆದು ಕೊಲೆ ಮಾಡಲು ಯತ್ನಿಸಿದ್ದಾನೆ ಎಂದು ಆರೋಪಿಸಲಾಗಿದೆ.

ಪ್ರಕರಣದ ತನಿಖೆ ವೇಳೆ ಆರೋಪಿಯೊಂದಿಗೆ ಒಬ್ಬ ಮಹಿಳೆ ಸೇರಿ ಒಟ್ಟು ಮೂವರು ಆರೋಪಿಗಳನ್ನು ಬಂಧಿಸಿ ನ್ಯಾಯಾಲಯಕ್ಕೆ ದೋಷಾರೋಪಣಾ ಪತ್ರ ಸಲ್ಲಿಸಲಾಗಿತ್ತು. ನಂತರ ಜಾಮೀನಿನ ಮೇಲೆ ಬಿಡುಗಡೆಯಾದ ಆರೋಪಿಯು ನ್ಯಾಯಾಲಯಕ್ಕೆ ಹಾಜರಾಗದೆ ಸುಮಾರು 12 ವರ್ಷಗಳಿಂದ ತಲೆಮರೆಸಿಕೊಂಡಿದ್ದರಿಂದ ಪ್ರಕರಣವನ್ನು ಎಲ್‌ಪಿಆರ್ (Long Pending Register) ಎಂದು ಪರಿಗಣಿಸಲಾಗಿತ್ತು.

ಈ ನಡುವೆ 2026ರಲ್ಲಿ ತಾಳಿಕೋಟೆ ಪೊಲೀಸ್ ಠಾಣೆಯಲ್ಲಿ ಮತ್ತೊಂದು ವಂಚನೆ ಪ್ರಕರಣ ದಾಖಲಾಗಿದ್ದು, ತಾನು ಡಿಎಸ್‌ಪಿ ಎಂದು ಹೇಳಿಕೊಂಡು ಜೈಲರ್ ಉದ್ಯೋಗ ಕೊಡಿಸುವುದಾಗಿ ನಂಬಿಸಿ ಮುದ್ದೇಬಿಹಾಳ ತಾಲೂಕಿನ ಹಂದ್ರಾಳ ಗ್ರಾಮದ ವ್ಯಕ್ತಿಯಿಂದ ರೂ. 8 ಲಕ್ಷ ಪಡೆದು ವಂಚಿಸಿರುವ ಆರೋಪವೂ ಇದೆ.

ಆರೋಪಿಯ ಪತ್ತೆಯನ್ನು ಆದ್ಯತೆಯಾಗಿ ಪರಿಗಣಿಸಿದ ಜಿಲ್ಲಾ ಪೊಲೀಸ್ ಅಧೀಕ್ಷಕ ಲಕ್ಷ್ಮಣ ನಿಂಬರಗಿ, ಐಪಿಎಸ್ ಅವರ ಮಾರ್ಗದರ್ಶನದಲ್ಲಿ ಎಪಿಎಂಸಿ ಪೊಲೀಸ್ ಠಾಣೆಯ ಪಿಎಸ್‌ಐ ಬಸವರಾಜ ತಿಪ್ಪರೆಡ್ಡಿ ನೇತೃತ್ವದಲ್ಲಿ ವಿಶೇಷ ತಂಡ ರಚಿಸಲಾಗಿತ್ತು.

ಆರೋಪಿ ವಿವಿಧ ಹೆಸರುಗಳು ಹಾಗೂ ಮೊಬೈಲ್ ಸಂಖ್ಯೆಗಳ ಬಳಸಿ ತನ್ನ ಗುರುತು ಮರೆಮಾಚಿಕೊಂಡು ವಿವಿಧ ಊರುಗಳಲ್ಲಿ ಸಂಚರಿಸುತ್ತಿದ್ದನು. ತಾಂತ್ರಿಕ ಮಾಹಿತಿ ಹಾಗೂ ಮೊಬೈಲ್ ಲೊಕೇಷನ್ ಆಧರಿಸಿ ಪೊಲೀಸರು ಆತನನ್ನು ಜುಲೈ 6, 2026ರಂದು ಬೆಂಗಳೂರಿನಲ್ಲಿ ಬಂಧಿಸಿ ನ್ಯಾಯಾಲಯಕ್ಕೆ ಹಾಜರುಪಡಿಸಿದ್ದಾರೆ.

ಪೊಲೀಸರ ಪ್ರಕಾರ, 2012ರಿಂದ ಮುದ್ದೇಬಿಹಾಳ, ಎಪಿಎಂಸಿ, ಆದರ್ಶನಗರ ಹಾಗೂ ತಾಳಿಕೋಟೆ ಪೊಲೀಸ್ ಠಾಣೆಗಳಲ್ಲಿ ಆರೋಪಿಯ ವಿರುದ್ಧ ವಂಚನೆ, ಸುಳ್ಳು ಗುರುತು ಬಳಕೆ, ಅಪಹರಣ, ಕೊಲೆ ಯತ್ನ ಹಾಗೂ ಶಸ್ತ್ರಾಸ್ತ್ರ ಕಾಯ್ದೆ ಸೇರಿದಂತೆ ಒಟ್ಟು ಐದು ಪ್ರಕರಣಗಳು ದಾಖಲಾಗಿವೆ.

ಸುಮಾರು 12 ವರ್ಷಗಳಿಂದ ತಲೆಮರೆಸಿಕೊಂಡಿದ್ದ ಆರೋಪಿಯನ್ನು ಬಂಧಿಸುವಲ್ಲಿ ಯಶಸ್ವಿಯಾದ ತನಿಖಾ ತಂಡದ ಅಧಿಕಾರಿಗಳು ಹಾಗೂ ಸಿಬ್ಬಂದಿಯ ಕಾರ್ಯವನ್ನು ಜಿಲ್ಲಾ ಪೊಲೀಸ್ ಅಧೀಕ್ಷಕ ಲಕ್ಷ್ಮಣ ನಿಂಬರಗಿ ಶ್ಲಾಘಿಸಿದ್ದಾರೆ.

## ಗಣತಿ ನಮೂನೆ ವಿತರಣೆಯಲ್ಲಿ ಸಾರ್ವಜನಿಕರ ಸಹಭಾಗಿತ್ವ ಅಗತ್ಯ

### ಬಿಎಲ್‌ಒಗಳಿಗೆ ಸಹಕಾರ ನೀಡಲು ಸಾರ್ವಜನಿಕರಿಗೆ ಜಿಲ್ಲಾಧಿಕಾರಿ ಡಾ. ಆನಂದ ಕೆ. ಕರೆ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್)-2026ರ ಅಂಗವಾಗಿ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒಗಳು) ಮನೆ-ಮನೆಗೆ ತೆರಳಿ ಗಣತಿ ನಮೂನೆಗಳನ್ನು ವಿತರಿಸುವ ಕಾರ್ಯದಲ್ಲಿ ನಿರತರಾಗಿದ್ದು, ಸಾರ್ವಜನಿಕರು ಹಾಗೂ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಅವರಿಗೆ ಅಗತ್ಯ ಸಹಕಾರ ಒದಗಿಸಬೇಕು ಎಂದು ಜಿಲ್ಲಾಧಿಕಾರಿ ಡಾ. ಆನಂದ ಕೆ. ಅವರು ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಎಸ್‌ಐಆರ್-2026 ಕುರಿತು ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮುಖ್ಯ ಚುನಾವಣಾ ಆಯೋಗದ ನಿರ್ದೇಶನದಂತೆ ಬಿಎಲ್‌ಒಗಳು ಮನೆ-ಮನೆಗೆ ತೆರಳಿ ಗಣತಿ ನಮೂನೆಗಳನ್ನು ವಿತರಿಸುವ ಕಾರ್ಯ ಕೈಗೊಂಡಿದ್ದಾರೆ. ಈ ಕಾರ್ಯವನ್ನು ಯಶಸ್ವಿಗೊಳಿಸಲು ಸಾರ್ವಜನಿಕರು ಸಹಕರಿಸಬೇಕಿದ್ದು, ಯಾವುದೇ ರೀತಿಯ ಗೊಂದಲಗಳಿಗೆ ಅವಕಾಶ ನೀಡಬಾರದು ಎಂದು ಹೇಳಿದರು. ಮತದಾರರ ಪಟ್ಟಿಯಲ್ಲಿರುವವರು ಮೃತಪಟ್ಟಿದ್ದರೆ, ಸ್ಥಳಾಂತರಗೊಂಡಿದ್ದರೆ ಅಥವಾ ಬೇರೆ ಕಾರಣಗಳಿಂದ ಮತದಾರರ ಪಟ್ಟಿಯಲ್ಲಿ ತಿದ್ದುಪಡಿ ಅಗತ್ಯವಿದ್ದರೆ, ಸಂಬಂಧಿಸಿದ ಬಿಎಲ್‌ಒಗಳಿಗೆ ಮಾಹಿತಿ ನೀಡಬೇಕು. ಮೃತಪಟ್ಟಿರುವ ಮತದಾರರ ಹೆಸರನ್ನು ಮತದಾರರ ಪಟ್ಟಿಯಿಂದ ತೆಗೆದುಹಾಕಲು ಮರಣ ಪ್ರಮಾಣಪತ್ರ ಅಥವಾ ಅದು ಲಭ್ಯವಿಲ್ಲದಿದ್ದಲ್ಲಿ ಕುಟುಂಬದ ಸದಸ್ಯರ ಲಿಖಿತ ಮಾಹಿತಿಯನ್ನು ಸಲ್ಲಿಸಬೇಕು ಎಂದು ಸೂಚಿಸಿದರು.

ಗಣತಿ ನಮೂನೆಗಳಲ್ಲಿ ಮಾಹಿತಿ ಅಪೂರ್ಣವಾಗಿದ್ದರೆ ಅಥವಾ ತಪ್ಪು ಮಾಹಿತಿ ದಾಖಲಾಗಿದ್ದರೆ, ಮುಂದಿನ ಹಂತದಲ್ಲಿ ಸಂಬಂಧಿತ ಮತಕ್ಷೇತ್ರದ ಸಹಾಯಕ ಚುನಾವಣಾಧಿಕಾರಿಗಳು (ಎಆರ್‌ಒಗಳು) ಪರಿಶೀಲಿಸಿ ಅಗತ್ಯ ತಿದ್ದುಪಡಿಗಳನ್ನು ಕೈಗೊಳ್ಳಲಿದ್ದಾರೆ ಎಂದು ಹೇಳಿದರು.

ಗ್ರಾಮೀಣ ಪ್ರದೇಶಗಳಿಗೆ ಹೋಲಿಸಿದರೆ ನಗರ ಪ್ರದೇಶಗಳಲ್ಲಿ ಸ್ಥಳಾಂತರಗೊಂಡಿರುವ ಮತದಾರರ ಸಂಖ್ಯೆ ಹೆಚ್ಚಿರುವುದರಿಂದ ಗೊಂದಲಗಳು ಉಂಟಾಗುವ ಸಾಧ್ಯತೆ ಇದೆ. ಆದ್ದರಿಂದ ಬಿಎಲ್‌ಒಗಳ ಕಾರ್ಯಕ್ಕೆ ಸಾರ್ವಜನಿಕರು ಸಂಪೂರ್ಣ ಸಹಕಾರ ನೀಡಬೇಕು ಎಂದು ಅವರು ತಿಳಿಸಿದರು.

ಗಣತಿ ನಮೂನೆಗಳನ್ನು ಕನ್ನಡ ಅಥವಾ ಆಂಗ್ಲ ಭಾಷೆಯಲ್ಲಿ ಭರ್ತಿ ಮಾಡಲು ಅವಕಾಶವಿದ್ದು, ಭಾಷೆಗೆ ಸಂಬಂಧಿಸಿದ ಯಾವುದೇ ಸಮಸ್ಯೆ ಇಲ್ಲ ಎಂದು ಅವರು ಸ್ಪಷ್ಟಪಡಿಸಿದರು.

ಒಂದಕ್ಕಿಂತ ಹೆಚ್ಚು ಹೆಸರು ಮತದಾರರ ಪಟ್ಟಿಯಲ್ಲಿ ಕಂಡುಬಂದರೆ, ಸಂಬಂಧಿಸಿದ ಮತದಾರರಿಗೆ ಮಾಹಿತಿ ನೀಡಿ ಒಂದು ಕಡೆ ಮಾತ್ರ ಹೆಸರು ಉಳಿಸಿ, ಉಳಿದ ಪಟ್ಟಿಗಳಿಂದ ಹೆಸರು ತೆಗೆದುಹಾಕಲು ಬಿಎಲ್‌ಒಗಳಿಗೆ ಸೂಚನೆ ನೀಡಲಾಗಿದೆ ಎಂದು ಹೇಳಿದರು.


ಸಭೆಯಲ್ಲಿ ಪ್ರೊಬೇಷನರಿ ಐಎಎಸ್ ಅಧಿಕಾರಿ ಅಭಿಷೇಕ್ ಸೆಹರಾ ವಿಜಯಪುರ ತಹಶೀಲ್ದಾರ್ ಪ್ರಶಾಂತ ಚನ್ನಗೊಂಡ ಸೇರಿದಂತೆ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

# 'ಮಳೆರಾಯ' ನಿಗೆ ಪ್ರಾರ್ಥನೆ, ಜನಪದ ಸಂಸ್ಕೃತಿ ಪ್ರತೀಕ

■ ಉದಯರಶ್ಮಿ ದಿನಪತ್ರಿಕೆ

**ಸಂಸ್ಕೃತಿ - ಸಂಪ್ರದಾಯ**

'ಗುರ್ಜಿ ಗುರ್ಜಿ ಎಲ್ಲಾಡಿ ಬಂದೆ, ಹಳ್ಳ–ಕೊಳ್ಳ ಸುತ್ತಾಡಿ ಬಂದೆ, ಕಾರ ಮಳೆಯೋ ಕಪಟ ಮಳೆಯೋ, ಸುರಿ ಸುರಿಯೋ ಮಳೆರಾಯ' ಎಂಬ ವರುಣದೇವನನ್ನು ಮಳೆಗಾಗಿ ಪ್ರಾರ್ಥಿಸುವ ಈ ಜಾನಪದ ಹಾಡನ್ನು ತಾವೆಲ್ಲರೂ ಕೇಳಿರಬಹುದು. ಮಳೆಗಾಗಿ ದೇವರಲ್ಲಿ ಮೊರೆ ಹೋಗುವುದು ಮತ್ತು ದೇವರಲ್ಲಿ ಪ್ರಾರ್ಥಿಸುವುದು ನಮ್ಮ ಭಾರತೀಯ ಸಂಸ್ಕೃತಿಯಲ್ಲಿ ಅನಾದಿ ಕಾಲದಿಂದಲೂ ನಡೆದುಕೊಂಡು ಬಂದ ನಂಬಿಕೆ. ಉತ್ತಮ ಮಳೆ, ಬೆಳೆ ಮತ್ತು ಅನ್ನದಾತರ ಸಮೃದ್ಧಿಗಾಗಿ ಜನತೆ ಮನೆಯಲ್ಲಿ ಯಾವುದೇ ಅಡುಗೆ ಮಾಡದೇ ವಾರ (ಉಪವಾಸ) ಮಾಡುವುದು, ಪೂಜೆ ಸಲ್ಲಿಸುವುದು ಮತ್ತು ಕತ್ತೆ ಮದುವೆ ಮಾಡುವುದು ಮತ್ತು ಗುರ್ಜಿ ಮಾಡಿ ದೇವರಲ್ಲಿ ವಿಶೇಷ ಪ್ರಾರ್ಥನೆ ಮಾಡುತ್ತಾರೆ. ವರುಣ ದೇವನಲ್ಲಿ (ಮಳೆರಾಯ) ಭೂಮಿಗೆ ಜೀವಜಲವನ್ನು ಕರುಣಿಸಿ, ಬರಗಾಲವನ್ನು ದೂರ ಮಾಡುವಂತೆ ಭಕ್ತಿ–ಭಾವದಿಂದ ನಿವೇದನೆ ಮಾಡಿಕೊಳ್ಳುತ್ತಾರೆ.





ಶತಮಾನಗಳಿಂದಲೂ ಆಚರಣೆಯಲ್ಲಿರುವ ಗುರ್ಜಿ ಪೂಜೆಯು ವಿಶಿಷ್ಟವಾಗಿದೆ. ಮಹಿಳೆಯರು ಮತ್ತು ಬಾಲಕರು ತಲೆಯ ಮೇಲೆ ತವೆ ಇಟ್ಟುಕೊಂಡು, ಅದರ ಮೇಲೆ ಆಕಳ ಸೆಗಣಿಯಿಂದ ಗುರ್ಜಿ ತಯಾರಿಸಿ, ಗುರ್ಜಿ ಹಾಡು ಹಾಡುತ್ತಾ, ಪ್ರತಿ ಮನೆಗೆ ತೆರಳಿ ಗುರ್ಜಿಗೆ ನೀರು ಸುರಿದು ದೇವರಲ್ಲಿ ಜನರು ಮಳೆ ನೀಡಲೆಂದು ಬೇಡಿಕೊಳ್ಳುತ್ತಾರೆ. ಇದರಿಂದ ಸಂಕಷ್ಟ ಕಾಲದಲ್ಲಿ ಇಡೀ ರೈತ ಸಮುದಾಯಕ್ಕೆ ಧನಾತ್ಮಕ ಶಕ್ತಿಯನ್ನು ತುಂಬುತ್ತಾರೆ. ಅಷ್ಟೇ ಅಲ್ಲದೇ ಜಾತಿ, ಮತ, ಪಂಥ–ಪಂಗಡಗಳ ಬೇಧ–ಭಾವವಿಲ್ಲದೇ ಇಡೀ ಊರೇ ಒಗ್ಗೂಡಿ ಸಕಲ ದೇವಾನುದೇವತೆಗಳಲ್ಲಿ ವರುಣನಿಗಾಗಿ ಭಕ್ತಿಪೂರ್ವಕವಾಗಿ ವಿಶೇಷ ಪ್ರಾರ್ಥನೆ ಸಲ್ಲಿಸುತ್ತಾರೆ.



**ಮಾನವ ಸಂಸ್ಕೃತಿಯ ತಾಯಿಬೇರು ಜನಪದ ಪರಂಪರೆ**

ಕಣ್ಣು ಮುಚ್ಚಿ ಕುಳಿತೆನೋ ವರುಣ ದೇವ, ಬೆಳೆ ಒಣಗಿ ಬಸವಳಿಯಿತು ಜೀವ, ಕಾರ ಮಳೆಯ ಸುರಿಸಿ, ಕಪಟ ಮಳೆ ಕರಗಿಸಿ, ಧರೆಯ ಸಿರಿ ತಣಿಸು ವರುಣ ದೇವ' ಎನ್ನುವ ಗ್ರಾಮೀಣ ಪ್ರದೇಶದಲ್ಲಿ ಮಳೆಗಾಗಿ ವರುಣ ದೇವನಿಗೆ ಮಹಿಳೆಯರು ಪ್ರಾರ್ಥನೆ ಮಾಡುವ ದೃಶ್ಯ ಕಂಡು ಬರುತ್ತದೆ. ಹಳ್ಳಿಗಾಡಿನ ಜನರು ಮಳೆಗಾಗಿ ಮೇಘರಾಜನನ್ನು ಪ್ರಾರ್ಥಿಸುವ ಸಾಂಪ್ರದಾಯಿಕ ಮತ್ತು ಭಕ್ತಿಪೂರ್ವಕವಾದ ಜಾನಪದ ಹಾಡು ಹಾಡುತ್ತಾ, ಮಣ್ಣಿನಿಂದ ಮಾಡಿದ ಗುರ್ಜಿ ಹೊತ್ತು ಪ್ರತಿ ಮನೆ ಮನೆಗೆ ತೆರಳಿ ನೀರು ಹಾಕಿಸಿಕೊಂಡು ಎಲ್ಲೆಲ್ಲೂ ಮಳೆರಾಯನಿಗೆ ಕೋರಿಕೆ ಸಲ್ಲಿಸುವುದು ಒಂದು ವಿಶೇಷತೆ.

**ಮಳೆಗಾಗಿ ವರುಣದೇವನ ಕೃಪೆಗಾಗಿ ಮೊರೆ**

ಜುಲೈತಿಂಗಳ ಮಧ್ಯಕಾಲ ಬಂದರೂ ಇನ್ನೂ ಮಳೆ ಬಾರದೇ ಇರುವ ಈ ಸಂದರ್ಭದಲ್ಲಿ ನಮ್ಮ ನವರಸಪುರದ ದೇವಸ್ಥಾನಗಳಲ್ಲಿ " ಓ ವರುಣ ದೇವನೇ, ಭೂಮಿಯ ಮೇಲಿನ ಬರವನ್ನು ನೀಗಿಸಿ, ರೈತರ ಮೊಗದಲ್ಲಿ ಮಂದಹಾಸ ಮೂಡಿಸಲು ಸುರಿಯುವ ಮಳೆಯನ್ನು ಕರುಣಿಸು" ಎಂದು ರುದ್ರಾಭಿಷೇಕ, ದೇವರಿಗೆ ಜಲಾಭಿಷೇಕ, ದೇವರಿಗೆ ಉಡಿ ತುಂಬುವುದು ಮತ್ತು ವರುಣದೇವವನ್ನು ಒಲಿಸಿಕೊಳ್ಳಲು ಓಂ ವರುಣಾಯ ನಮಃ ಮತ್ತು 'ಸರ್ವೇ ಜನಾಃ ಸುಖಿನೋ ಭವಂತು" ಎಂಬ ಮಂತ್ರ ಪಠಣದಂತಹ ವಿಶೇಷ ಪೂಜಾ ಕೈಂಕರ್ಯಗಳು ನಡೆಯುತ್ತಿವೆ. ನಮ್ಮ ನವರಸಪುರ ಊರಿನ ಜನತೆ ಒಗ್ಗೂಡಿ, ಪ್ರತಿ ಮಂಗಳವಾರ ಮತ್ತು ಶುಕ್ರವಾರದಂದು (ಐದು ದಿನ) ವಾರ ಮಾಡುತ್ತಾ, ಮನೆಯಲ್ಲಿ ಯಾವುದೇ ತರಹದ ಅಡುಗೆ ಮಾಡದೇ ಉಪವಾಸ ವ್ರತವನ್ನು ಆಚ–ರಿಸುತ್ತಾರೆ. ಭಜನೆ, ಸತ್ಸಂಗ, ಕೀರ್ತನೆ, ದೇವರ ನಾಮಸ್ಮರಣೆ ಮತ್ತು ದೇವರನ್ನು ಒಲಿಸಿಕೊಳ್ಳಲು ಭಕ್ತಿಗೀತೆಗಳ ಹಾಡು ಹೀಗೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ದೇವರಲ್ಲಿ ಮಳೆಗಾಗಿ ಮೊರೆ ಹೋಗುತ್ತಾರೆ.

**ಗುರ್ಜಿ ಪೂಜೆ ವೈಶಿಷ್ಟ್ಯತೆ**

ಮಳೆ ಬಾರದೇ ಇದ್ದಾಗ ನಮ್ಮ ಪೂರ್ವಜರ ಕಾಲದಿಂದಲೂ ಗ್ರಾಮೀಣ ಪ್ರದೇಶದಲ್ಲಿ

**ರೈತ ಮತ್ತು ಪ್ರಕೃತಿಯ ನಡುವೆ ಅವಿನಾಭಾವ ಸಂಬಂಧ**

ನಮ್ಮ ದೇಶದ ಸಂಸ್ಕೃತಿಯಲ್ಲಿ ರೈತರು ಭೂಮಿಯನ್ನು 'ಭೂಮಿ ತಾಯಿ' ಎಂದು ಪೂಜಿಸುತ್ತಾರೆ. ದೈನಂದಿನವಾಗಿ ರೈತ ಪ್ರಕೃತಿ, ಗಾಳಿ, ಮಳೆ, ಸೂರ್ಯ ಮತ್ತು ಭೂ ತಾಯಿಯನ್ನು ಸದಾ ದೈವಿಕ ಭಾವದಿಂದ ಪೂಜಿಸುತ್ತಾನೆ. ರೈತ ಮತ್ತು ಪ್ರಕೃತಿಯ ಮಧ್ಯೆ ಅವಿನಾಭಾವ ಸಂಬಂಧವಿದೆ. ವರುಣನಿಗೆ ಮಳೆಗಾಗಿ ನಡೆಸುವ ಜಾನಪದ ಮತ್ತು ಧಾರ್ಮಿಕ ಆಚರಣೆಗಳು ನಮ್ಮ ಗ್ರಾಮೀಣ ಜನರ ಜನಪದ ಸಂಸ್ಕೃತಿಯ ಪ್ರತೀಕವಾಗಿವೆ. ವಿಜ್ಞಾನ–ತಂತ್ರಜ್ಞಾನದ ಇಂದಿನ 5ಜಿ ಯುಗದಲ್ಲೂ ಇಂತಹ ಸಾಂಪ್ರದಾಯಿಕ ಆಚ–ರಣೆಗಳು ನಮ್ಮ ಸಂಸ್ಕೃತಿ–ಸಂಪ್ರದಾಯಕ್ಕೆ ಹಿಡಿದ ಕೈಗನ್ನಡಿಯಾಗಿದ್ದು, ಇನ್ನೂ ಜೀವಂತವಾಗಿವೆ ಎಂದರೆ ಅತಿಶಯೋಕ್ತಿಯಾಗಲಾರದು. ಆದ್ದ–ರಿಂದ ನಾವು ಎಷ್ಟೇ ಅಭಿವೃದ್ಧಿ ಸಾಧಿಸಿದರೂ ನಮ್ಮ ಮೂಲ ಜನಪದ ಸಂಸ್ಕೃತಿ, ಸಂಪ್ರದಾಯ, ಪರಂಪರೆ, ಆಚರಣೆ ಮತ್ತು ಗ್ರಾಮೀಣ ಸೊಗಡನ್ನು ಪ್ರತಿಬಿಂಬಿಸುವ ಕಲೆಯನ್ನು ಎಂದಿಗೂ ಮರೆಯಬಾರದು.

ಲೇಖನ
– ಮಲ್ಲಪ್ಪ. ಸಿ.
ಖೊದ್ನಾಪೂರ
(ತಿಕೋಟಾ)
ವಿಜಯಪುರ



# ದೇವಲಗಾಣಗಾಪೂರ ಪೊಲೀಸರಿಂದ ಮೂವರು ಅಂತರರಾಜ್ಯ ಕಳ್ಳರ ಬಂಧನ



ಅಫಜಲಪುರ ; ದೇವಲ ಗಾಣಗಾಪುರ ಪೊಲೀಠಾಣಾ ವ್ಯಾಪ್ತಿಯಲ್ಲಿ ನಡೆದಿದ್ದ 2 ಪ್ರತ್ಯೇಕ ಸರಗಳ್ಳತನ ಪ್ರಕರಣಗಳನ್ನು ಪೊಲೀಸರು ಬೇಧಿಸಿದ್ದು, ಮೂವರು ಅಂತರರಾಜ್ಯ ಕಳ್ಳರನ್ನು ಬಂಧಿಸಿ 40 ಗ್ರಾಂ ಬಂಗಾರದ ಆಭರಣಗಳನ್ನು ವಶಪಡಿಸಿಕೊಂಡಿದ್ದಾರೆ.

ಸೋಲಾಪುರ ರಸ್ತೆಯ ಜೋಪಡಿ ಪಟ್ಟಿ ನಿವಾಸಿಗಳಾದ ಭಗತ್ ಸಿಂಗ್ ಅಶೋಕ ಸಾಳುಂಕೆ, ಬಾದಲ್ ಅಶೋಕ

ಸಾಳುಂಕೆ ಹಾಗೂ ಅಭಿಮನ್ಯು ಅರ್ಜುನ ಡಾಂಗೆಯನ್ನು ಬಂಧಿಸಲಾಗಿದೆ ಎಂದು ಪೊಲೀಸ್ ಇಲಾಖೆ ಪ್ರಕಟಣೆಯಲ್ಲಿತಿಳಿಸಿದೆ.2025ರ ನವೆಂಬರ್ 5 ರಂದು ದೇವಲಗಾಣಗಾಪುರ ಬಸ್ ನಿಲ್ದಾಣದಲ್ಲಿ ಅಶ್ವಿನಿ ಎಂಬ ಮಹಿಳೆಯ 20 ಗ್ರಾಂ ತೂಕದ ಬಂಗಾರದ ತಾಳಿ ಸರ ಕಳ್ಳತನವಾಗಿತ್ತು. 2026ರ ಫೆಬ್ರವರಿ 16 ರಂದು

ದೇವಲ ಗಾಣಗಾಪುರ ಗ್ರಾಮದ ಸಂಗಮದ ಭೀಮಾನದಿ ದಂಡೆಯ ಮೇಲೆ ಕಲ್ಯಾಣಕ್ಕೆ ಬಂದಿದ್ದ ಕಲಾವತಿ ಎಂಬುವವರ 20 ಗ್ರಾಂ ಚಿನ್ನದ ತಾಳಿ ಸರ, 10 ಗ್ರಾಂ ತಾಳೆಗುಂಡು ಹಾಗೂ 10 ಗ್ರಾಂ ಜೋರಮಾಳ ಸೇರಿ ಒಟ್ಟು 40 ಗ್ರಾಂ ಚಿನ್ನಾಭರಣವನ್ನು ಕಳ್ಳರು ದೋಚಿ ಪರಾರಿಯಾಗಿದ್ದರು. ಸತತವಾಗಿ ನಡೆಯುತ್ತಿದ್ದ ಕಳ್ಳತನ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿದ ಎಸ್ಪಿ ಅಡ್ಡೂರು

ಶ್ರೀನಿವಾಸುಲು ಹಾಗೂ ಎಎಸ್ಪಿ ಮಹೇಶ ಮೇಘಣ್ಣವರ ವಿಶೇಷ ತಂಡ ರಚಿಸಲಾಗಿತ್ತು. ಡಿವೈಎಸ್ಪಿ ತಮ್ಮರಾಯ ಪಾಟೀಲ್ ಹಾಗೂ ಸಿಪಿಐ ಲಖನ್ ಮಸಗುಪ್ಪಿನೇತೃತ್ವದಲ್ಲಿ ದೇವಲ ಗಾಣಗಾಪುರ ಠಾಣೆಯ ಪಿಎಸ್ಐ ಸಂಗೀತಾ ಸಿಂಧೆ ಹಾಗೂ ಸಿಬ್ಬಂದಿ ರವೀಂದ್ರ, ಸಂಗಣ್ಣಮಕ್ತುಂ ಪಟೇಲ್, ಶಿವಯ್ಯ, ಅಣ್ಣಪ್ಪ, ಚಿದಾನಂದ, ಆನಂದ,

ಯಲ್ಲಪ್ಪ, ಚಿದಾನಂದ, ಸಂತೋಷ, ಭಾಗಣ್ಣ ಒಳಗೊಂಡತಂಡವು ತನಿಖೆ ಕೈಗೊಂಡು ಮೂವರು ಕಳ್ಳರನ್ನು ಬಂಧಿಸಿದ್ದಾರೆ.

# ಬಿತ್ತನೆಯನ್ನೇ ಮಾಡಬೇಡಿ, ಪರಿಹಾರವನ್ನೇ ಕೇಳಬೇಡಿ ಎಂಬ ಕಾಂಗ್ರೆಸ್ ಸರ್ಕಾರದ ರೈತ ವಿರೋಧಿ ನಿರ್ಧಾರ ಖಂಡನೀಯ



ಕಲಬುರಗಿ:ರಾಜ್ಯದ ರೈತರ ಬದುಕಿಗೆ ಮತ್ತೊಂದು ದೊಡ್ಡ ಹೊಡೆತ ನೀಡುವ ರೀತಿಯಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನೇತೃತ್ವದ ಕಾಂಗ್ರೆಸ್ ಸರ್ಕಾರ ಕೈಗೊಂಡಿರುವ " ಬೆಳೆಯನ್ನೇ ಬೆಳೆಯಬೇಡಿ ಪರಿಹಾರವನ್ನೇ ಕೇಳಬೇಡಿ " ಎಂಬ ಕ್ಯಾಬಿನೆಟ್ ನಿರ್ಧಾರ ಅತ್ಯಂತ ನಿರ್ಲಜ್ಜ, ರೈತ ವಿರೋಧಿ ಹಾಗೂ ಅಮಾನವೀಯವಾಗಿದೆ ಎಂದು ಮಹಾಗಾಂವ ಬಿಜೆಪಿ ಮುಖಂಡ ಮಲ್ಲಿಕಾರ್ಜುನ ಮರತೂರಕರ್ ಕಟುವಾಗಿ ಟೀಕಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿದ ಅವರು,"ಪ್ರಕೃತಿಯ ಮೇಲೆ ಅವಲಂಬಿತವಾಗಿರುವ ರೈತರು ಮಳೆ ಕೊರತೆ, ಅತಿವೃಷ್ಟಿ, ಬೆಲೆ ಕುಸಿತ ಮತ್ತು ಸಾಲದ ಹೊರೆಗಳಿಂದ ಈಗಾಗಲೇ ತತ್ತರಿಸಿದ್ದಾರೆ. ಇಂತಹ ಸಂದರ್ಭದಲ್ಲಿ ಸರ್ಕಾರ ರೈತರ ಬೆನ್ನಿಗೆ ನಿಲ್ಲುವುದನ್ನು ಬಿಟ್ಟು ರೈತರೆಲ್ಲರೂ ಆತ್ಮಹತ್ಯೆಯ ಹಾದಿ ತೋಳೆಯುವಂತಹ ನಿರ್ಣಯಗಳನ್ನು ತೆಗೆದುಕೊಳ್ಳುವುದು ಸರಿಯಲ್ಲ.ಸರ್ಕಾರ ತನ್ನ ಜವಾಬ್ದಾ–ರಿಯಿಂದ ತಪ್ಪಿಸಿಕೊಳ್ಳಲು ಸಾಧ್ಯವಿಲ್ಲ.ಕಾಂಗ್ರೆಸ್ ಪಕ್ಷ ಚುನಾವಣೆ ಸಂದರ್ಭದಲ್ಲಿ ರೈತರ ಪರವಾಗಿ ಅನೇಕ ಭರವಸೆಗಳನ್ನು ನೀಡಿತ್ತು. ಆದರೆ ಅಧಿಕಾರಕ್ಕೆ ಬಂದ ನಂತರ ರೈತರ ಸಂಕಷ್ಟಗಳನ್ನು ನಿರ್ಲಕ್ಷಿಸಿ, ಪರಿಹಾರದ ಹೊಣೆಗಾ–ರಿಕೆಯಿಂದಲೇ ಹಿಂದೆ ಸರಿಯುತ್ತಿರುವುದು ರೈತ–ರಿಗೆ ಮಾಡುತ್ತಿರುವ ದ್ರೋಹವಾಗಿದೆ.ಈ ರೈತ ವಿರೋಧಿ ಕ್ಯಾಬಿನೆಟ್ ನಿರ್ಧಾರವನ್ನು ತಕ್ಷಣ ಹಿಂಪಡೆಯಬೇಕು.ಬೆಳೆ ಹಾನಿಗೊಳಗಾದ ಎಲ್ಲಾ ರೈತರಿಗೆ, ಅವರು ವಿಮೆ ಪಡೆದಿರಲಿ ಅಥವಾ ಪಡೆಯದಿರಲಿ, ರಾಜ್ಯ ಸರ್ಕಾರದಿಂದ ಸಮರ್ಪಕ ಪರಿಹಾರ ಘೋಷಿಸಬೇಕು. ಬರ, ಅತಿವೃಷ್ಟಿ ಹಾಗೂ ಪ್ರಕೃತಿ ವಿಕೋಪದಿಂದಿಂದ ಸಂಕಷ್ಟದಲ್ಲಿರುವ ರೈತರಿಗೆ ತುರ್ತು ವಿಶೇಷ ಪ್ಯಾಕೇಜ್ ಪ್ರಕಟಿಸಬೇಕು.ರಾಜ್ಯದ ಅನ್ನದಾತರನ್ನು ಸಂಕಷ್ಟದ ಸಮಯದಲ್ಲಿ ಕೈಬಿಡುವ ಸರ್ಕಾರವನ್ನು ಜನಪ್ರತಿನಿಧಿಗಳು ತೀವ್ರವಾಗಿ ಖಂಡಿಸುತ್ತದೆ. ರೈತರ ಬದುಕು ಉಳಿಸುವ ನಿಟ್ಟಿನಲ್ಲಿ ಸರ್ಕಾರ ತಕ್ಷಣ ತನ್ನ ನಿರ್ಧಾರವನ್ನು ಮರುಪ–ರಿಶೀಲಿಸಿ, ರೈತಪರ ನಿಲುವು ತಾಳಬೇಕೆಂದು ಅವರು ಆಗ್ರಹಿಸಿದ್ದಾರೆ.



# ಸೂಪರ್ ಎಲ್ನಿನೋ ಸಂಕಷ್ಟ:ಬರ ಪರಿಸ್ಥಿತಿ ಖುದ್ದಾಗಿ ಅರಿಯಲು ಸಿ.ಎಂ. ಕಲಬುರಗಿ

ಕಲಬುರಗಿ: ಸೂಪರ್ ಎಲ್ನಿನೋ ಕಾರಣದಿಂದ ನಾಡಿನಾದ್ಯಂತ ಬರದ ಛಾಯೆ ಆವರಿಸಿದ್ದರಿಂದ ವಿಭಾಗವಾರು ಬರ ಪರಿಸ್ಥಿತಿ ಖುದ್ದಾಗಿ ಅರಿಯಲು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರು ಕಲಬುರಗಿಗೆ ಆಗಮಿಸುತ್ತಿದ್ದಾರೆ ಎಂದು ರಾಜ್ಯದ ಗೃಹ, ಐ.ಟಿ–ಬಿ.ಟಿ ಹಾಗೂ ಇ–ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು. Geograph-icReference ರವಿವಾರ ನಗರದ ಡಿ.ಸಿ. ಕಚೇರಿ ಸಭಾಂಗಣದಲ್ಲಿ ಕರೆಯಲಾದ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಸೂಪರ್ ಎಲ್ನಿನೋ ಸಮಸ್ಯೆ ಇಲ್ಲಷೆ ಇಲ್ಲ. ಸೌತ್ ಆಫ್ರಿಕಾ, ಆಸ್ಟ್ರೇಲಿಯಾ, ಯೂರೋಪ್ ಕೆಲ ಭಾಗದಲ್ಲಿಯೂ ಕಂಡುಬಂದಿದೆ. ಇದು ಮಳೆ ಕೊರತೆ ಜೊತೆಗೆ ಬಿಸಿ ಗಾಳಿ ಹೆಚ್ಚಿಸಲಿದೆ. ಹೀಗಾಗಿ ಮುಂದಿನ ದಿನದಲ್ಲಿ ಇದರ ಸವಾಲನ್ನು ಸಮರ್ಥವಾಗಿ ಎದುರಿಸಲು ಈಗಾಗಲೆ ಸಿ.ಎಂ ಅವರು ಬೆಂಗಳೂರಿನಲ್ಲಿ ಎರಡು ಸಲ ಸಭೆ ನಡೆಸಿದ್ದು, ಇದೀಗ ಕಲ್ಯಾಣ ಕರ್ನಾಟಕದಿಂದಲೆ ವಿಭಾಗವಾರು ಬರ ಕುರಿತು ಸಭೆ ಇಲ್ಲಿ ಮಂಗಳವಾರ ನಡೆಸಲಿದ್ದಾರೆ ಎಂದರು. ಮುಖ್ಯಮಂತ್ರಿಗಳು ಸೋಮವಾರ ಬೀದರ್‌ಗೆ ಆಗಮಿಸಿ ಬಸವಕಲ್ಯಾಣಕ್ಕೆ ಮೊದಲು ಭೇಟಿ ನೀಡಲಿದ್ದಾರೆ. ಸಂಜೆ ವೇಳೆಗೆ ಕಲಬುರಗಿಗೆ ಬರಲಿದ್ದಾರೆ. ನಂತರ, ಸಮಯಾವಕಾಶಕ್ಕೆ ಅನುಗುಣವಾಗಿ ಶರಣಬಸವೇಶ್ವರ ದೇವಾಲಯ ಹಾಗೂ ಕೆ.ಬಿ.ಎನ್. ದರ್ಗಾಕ್ಕೆ ಭೇಟಿ ನೀಡುವ ಸಾಧ್ಯತೆ ಇದೆ. ಮಂಗಳವಾರ ಬೆಳಿಗ್ಗೆ ವಿಭಾಗೀಯ ಮಟ್ಟದ ಅಧಿಕಾರಿಗಳ ಸಭೆ ನಡೆಸಲಿದ್ದು, ಬರ ಪರಿಸ್ಥಿತಿ ಹಾಗೂ ಬರ ಎದುರಿಸಲು ಕೈಗೊಳ್ಳಬೇಕಾದ ಕ್ರಮದ ಬಗ್ಗೆ ಸುರ್ದೀರ್ಘ ಚರ್ಚೆ ನಡೆಸಲಿದ್ದಾರೆ. ನಂತರ, ಮಾಧ್ಯಮಗಳಿಗೆ ವಿವರಣೆ ನೀಡಲಿದ್ದಾರೆ ಎಂದರು.

ಜೂನ್ ಅಂತ್ಯದ ವರೆಗೆ ನಿರೀಕ್ಷಿತ ಮಳೆ ಬಂದಿಲ್ಲ. ಇದೂವರೆಗೆ ಶೇ.35ರಷ್ಟು ಮಳೆ ಕೊರತೆಯಾಗಿದ್ದರಿಂದ ಉದ್ದು, ಹೆಸರು ಬೆಳೆ ಕೈಕೊಟ್ಟಂತಾಗಿದೆ. ಮೋಡ ಬಿತ್ತನೆ ಚರ್ಚೆಯು ನಡೆಯುತ್ತಿದೆಯಾದರು ಸರ್ಕಾರದ ಮುಂದೆ ಸದ್ಯಕ್ಕೆ ಪ್ರಸ್ತಾವನೆ ಇಲ್ಲ. ಜುಲೈ ತಿಂಗಳ ಅಂತ್ಯದ ವರೆಗೆ ಮಳೆ ಬರುವ ನಿರೀಕ್ಷೆ ಹೊಂದಲಾಗಿದೆ ಎಂದರು.

# ಡಾ. ಫಾರುಕ್ ಮಣ್ಣೂರ ನೇತೃತ್ವದಲ್ಲಿ ಎಸ್ಐಆರ್ ಬಗ್ಗೆ ಜಾಗೃತಿ ಸಭೆ

ಕಲಬುರಗಿ: ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್ಐಆರ್) ಪ್ರಕ್ರಿಯೆಯನ್ನು ಪ್ರತಿಯೊಬ್ಬ ನಾಗರಿಕರು ಜವಾಬ್ದಾರಿಯಿಂದ ಪೂರ್ಣಗೊಳಿಸಿ, ಯಾವುದೇ ಅರ್ಹ ಮತದಾರರ ಹೆಸರು ಮತಪಟ್ಟಿಯಿಂದ ಕೈಬಿಡದಂತೆ ಎಚ್ಚರಿಕೆ ವಹಿಸಬೇಕು ಎಂದು ಸಮಾಜ ಸೇವಕ ಡಾ. ಫಾರುಕ್ ಮಣ್ಣೂರ ಹೇಳಿದ್ದರು.

ಆಳಂದ ಪಟ್ಟಣದಲ್ಲಿ ಸಮಾಜ ಸೇವಕ ಡಾ. ಫಾರುಕ್ ಮಣ್ಣೂರ ಅವರು ಏರ್ಪಡಿಸಿದ ಎಸ್ಐಆರ್‌ಬಗ್ಗೆ ಜಾಗೃತಿ ಸಭೆಗೆ ಚಾಲನೆ ನೀಡಿ ಮಾತನಾಡಿ ಮತದಾರರ ಪಟ್ಟಿಯ ಪರಿಷ್ಕರಣೆ, ಎಸ್ಐಆರ್‌ಅರ್ಜಿ ಭರ್ತಿ ವಿಧಾನ, ಅಗತ್ಯ ದಾಖಲೆಗಳು ಹಾಗೂ ಸಾರ್ವಜನಿಕರು ಅನುಸರಿಸಬೇಕಾದ ಮುನ್ನೆಚ್ಚರಿಕೆ ಕ್ರಮಗಳ ಕು–ರಿತು ಸವಿಸ್ತಾರವಾಗಿ ಮಾಹಿತಿ ನೀಡಿ ಮಾತನಾಡಿ . ಎಸ್ಐಆರ್‌ಫಾರಂ ಅನ್ನು ಪ್ರತಿಯೊಬ್ಬ ಮತದಾರರು ಸ್ವತಃ ಪರಿಶೀಲಿಸಿ ನಿಖರ ಮಾಹಿತಿಯೊಂದಿಗೆ ಭರ್ತಿ ಮಾಡಬೇಕು ಎಂದು ತಿಳಿಸಿದರು. ತಮ್ಮ ಹೆಸರಿನ ಜೊತೆಗೆ ಕುಟುಂಬದ ಸದಸ್ಯರು ಹಾಗೂ ನೆರೆಹೊರೆಯವರ ಹೆಸರುಗಳು ಮತದಾರರ ಪಟ್ಟಿಯಲ್ಲಿ ಸರಿಯಾಗಿವೆಯೇ ಎಂಬುದನ್ನು ಖಚಿತಪಡಿಸಿಕೊಂಡು, ಯಾರ ಹೆಸರೂ ಅನಗತ್ಯವಾಗಿ ಕೈಬಿಡದಂತೆ ಜಾಗೃತಿ ವಹಿಸಬೇಕು ಎಂದು ಹೇಳಿದರು.

# ಜನರ ಸುರಕ್ಷತೆಗಾಗಿ ಹೆಲ್ಮೆಟ್ ಕಡ್ಡಾಯ :ಪೊಲೀಸ್ ಆಯುಕ್ತ ಡಾ.ಶರಣಪ್ಪ ಢಗೆ




ಕಲಬುರಗಿ: ಬೈಕ್ ಸವಾರರ ಸುರಕ್ಷತೆಗಾಗಿ ಕಲಬುರಗಿ ಸಂಚಾರ ಪೊಲೀಸ್ ಇಲಾಖೆ ಕೈಗೊಂಡಿರುವ ಹೆಲ್ಮೆಟ್ ಕಡ್ಡಾಯ ಜಾಗೃತಿಯನ್ನು ಬೆಂಬಲಿಸಿ ಜಯನಗರ ಶಿವಮಂದಿರ ಅಭಿವೃದ್ಧಿ ಟ್ರಸ್ಟ್, ಜಾಗೃತಿ ಕಾಲೋನಿ ಕ್ಷೇಮಾಭಿವೃದ್ಧಿ ಸಂಘ ಹಾಗೂ ಕಲಬುರಗಿ ನಾಗ–ರಿಕರ ಸಮಿತಿ ಕಲಬುರಗಿ ಸಂಚಾರ ಪೊಲೀಸ್ ಇಲಾಖೆ ಸಹಭಾಗಿತ್ವದಲ್ಲಿ ಭಾನುವಾರ ನಗರದ ಸುಪರ ಮಾರ್ಕೆಟ್ ದಿಂದ ಪ್ರಾಂಭವಾಗಿ ಸರ್ದಾರ್ ವಲ್ಲಭಭಾಯ್ ಪಟೇಲ್ ವೃತ್ತದವರೆಗೆ ಹೆಲ್ಮೆಟ್ ಧರಿಸಿ ಬೈಕ್ ರ್ಯಾಲಿ ಜರುಗಿತು. ಹೆಲ್ಮೆಟ್ ಧರಿಸದೆ ಚಲಾಯಿಸುತ್ತಿದ್ದ ಬೌಕ್ ಸವಾವರರನಿನು ತಡೆದು ಹೆಲ್ಮೆಟ್ ಧರಿಸುವ ಬಗ್ಗೆತಿಳಿಹೇಳಲಾಯಿತು.

ಇದಕ್ಕೂ ಮೊದಲು ಬೈಕ್ ರ್ಯಾಲಿಗೆ ಚಾಲನೆ ನೀಡಿದ ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್ .ಡಿ ಮಾತನಾಡಿ ನಗರದಾದ್ಯಂತ ದಿನೇ ದಿನೇ ಅಪಘಾತಗಳು ಸಂಭವಿಸುತ್ತಿವೆ.ಇದರಲ್ಲಿ ಬೈಕ್ ಸವಾರರ ತಲೆಗೆ ಪೆಟ್ಟು ಬಿದ್ದು ಗಂಭೀರವಾಗಿ ಗಾಯಗೊಂಡು ಆಸ್ಪತ್ರೆಗೆ ದಾಖಲಾಗುವ ಪ್ರಕರಣ ಹೆಚ್ಚಾಗುತ್ತಿವೆ.ಅಲ್ಲದೆ ಹಲವರು ತಮ್ಮ ಪ್ರಾಣವನ್ನು ಕಳೆದುಕೊಂಡಿದ್ದಾರೆ.ಇದನ್ನು ತಪ್ಪಿಸಲು ಕಲಬುರಗಿ ಪೊಲೀಸ್ ಇಲಾಖೆ ಜನರಲ್ಲಿ ಹೆಲ್ಮೆಟ್ ಸುರಕ್ಷತೆ ಮತ್ತು ಸಂಚಾರ ನಿಯಮಗಳ ಬಗ್ಗೆ ಜಾಗೃತಿ ಮೂಡಿಸುವ ಕೆಲಸ ನಿರಂತರವಾಗಿ ನಡೆಯುತ್ತಿದೆ.ಆದರೆ ಬೈಕ್ ಅನೇಕ ಬೈಕ್ ಸವಾರರು ಹೆಲ್ಮೆಟ್ ಧರಿಸುತ್ತಿಲ್ಲ.ಸಾರ್ವಜನಿಕರಲ್ಲಿ ಹೆಲ್ಮೆಟ್ ಜಾಗೃತಿ ಮೂಡಿಸುವ ಉದ್ದೇಶದಿಂದ ಬೈಕ್ ರ್ಯಾಲಿ ಹಮ್ಮಿಕೊಳ್ಳಲಾಗಿದೆ.ಜನರು ಉಲ್ಲಂಘಿಸಿದರೆ ದಂಡ ಹಾಕಲಾಗುವುದು ಎಂದರು. ಸಂಚಾರ ಪೊಲೀಸ್ ಉಪ ವಿಭಾಗದ ಸಹಾಯಕ ಆಯುಕ್ತರಾದ ಡಿ.ಟಿ.ಪ್ರಭು ಮಾತನೀಡಿ ಬೈಕ್ ಸವಾರರ ಸುರಕ್ಷತೆಗೆ ಹೆಲ್ಮೆಟ್ ಕಡ್ಡಾಯಗೊಳಿಸಲಾಗಿದೆ.ಜನರು ತಮ್ಮ ಸುರಕ್ಷತೆಯನ್ನು ಅರ್ಥಮಾಡಿಕೊಂಡು ಸಂಚಾರ ನಿಯಮ ಪಾಲಿಸಬೇಕು ಎಂದರು.ಹೋರಾಟಗಾರ ಹಾಗೂ ಜಯನಗರ ಶಿವಮಂದಿರ ಅಭಿವೃದ್ಧಿ ಟ್ರಸ್ಟ್ ಅಧ್ಯಕ್ಷ ಲಿಂಗರಾಜ ಸಿರಗಾಪೂರ ಮಾತನಾಡಿ ಜನರು ಹೆಲ್ಮೆಟ್ ಧರಿಸುವುದ–ರಿಂದ ತಮ್ಮ ಪ್ರಾಣ ರಕ್ಷಣೆ ಮಾಡಿಕೊಳ್ಳಬೇಕು.ಕಾನೂನು ಇರುವುದು ನಮ್ಮ ಸುರಕ್ಷತೆಗಾಗಿ ಇದೆ .ಕುಟುಂಬದ ಬಗ್ಗೆ ಕಾಳಜಿ ವಹಿಸಬೇಕು ಎಂದರು.ಟ್ರಾಫೀಕ್ ಸಿಪಿಐ ಶಕೀಲ ಅಂಗಡಿ,ಎಸ್.ಐ.ಸುಮಂಗಲಾ,ಚಿಫ್ ಟ್ರಾಫಿಕ್ ವಾರ್ಡನ್ ಶರಣಬಸಪ್ಪ ಪಾಟೀಲ,ವಿರೇಶ ದಂಡೋತಿ,ಜಾಗೃತಿ ಕಾಲೋನಿ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ರಾಜಶೇಖರ ಮಾಗ,ಬಸವರಾಜ ಸಾಲಿಮಠ,ಬಸವರಾಜ ಮಾಗಿ,ಗುರುಪಾದಪ್ಪ ಕಾಂತಾ,ವಿರಪ್ಪ ಹುಡುಗಿ,ಮಲ್ಲಯ್ಯಸ್ವಾಮಿ ಗಂಗಾಧರಮಠ,ಮನೋಹರ ಬಡಶೇಷಿ,ಹೋರಾಟಗಾರ ಗಿರೀಶಗೌಡ ಇನಾಂದಾರ,ರಾಜು ಜೈನ್,ಪ್ರಭು ಪಾಟೀಲ,ಅಮೀತ ನಾಗನಹಳ್ಳಿ ,ರಾಜು ಬಂದರವಾಡ,ಮಂಜುನಾಥ ಸಿರಗಾಪೂರ,ಜಾಗೃತಿ ಕಾಲೋನಿ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು,ಸದಸ್ಯರು ಸೇರಿದಂತೆ ಸಂಚಾರ ಪೊಲೀಸ್ ಇಲಾಖೆಯ ಅಧಿಕಾರಿಗಳು, ಪೊಲೀಸರು ಭಾಗವಹಿಸಿದ್ದರು.ಸಂಘಟನೆಯ ಮುಖಂಡರು, ಸಾರ್ವಜನಿಕರು ತಮ್ಮ ಬೈಕ್ ಜೊತೆಗೆ ಹೆಲ್ಮೆಟ್ ದೊಂದಿಗೆ ರ್ಯಾಲಿಯಲ್ಲಿ ಭಾಗವಹಿಸಿದ್ದರು.

# ಗುಣಮಟ್ಟದ ಶಿಕ್ಷಣಕ್ಕೆ ನಮ್ಮ ಸಿಎಸ್ಆರ್ ನಿತ್ಯ ಸಹಕಾರ: ಚೇತನ್ ವಾಘ್ಮೋರೆ

ಸೇಡಂ: ನಮ್ಮ ಸಿಮೆಂಟ್ ಕಂಪನಿ ವ್ಯಾಪ್ತಿಯಲ್ಲಿ ಬರುವ ಶಾಲೆಗಳಲ್ಲಿ ಶೈಕ್ಷಣಿಕ ಗುಣಮಟ್ಟವನ್ನು ಹೆಚ್ಚಿಸಲು ಹಾಗೂ ವಿದ್ಯಾರ್ಥಿಗಳಿಗೆ ಉತ್ತಮ ಮೂಲಸೌಕರ್ಯ ಕಲ್ಪಿಸಲು ನಮ್ಮ ಸಿಎಸ್ಆರ್ (ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆ) ನಿಧಿಯ ಸಹಕಾರ ನಿರಂತರವಾಗಿರಲಿದೆ ಎಂದು ಸಿಎಸ್ಆರ್ ವಿಭಾಗದ ಮುಖ್ಯಸ್ಥರಾದ ಚೇತನ್ ವಾಗ್ಮೋರೆ ಹೇಳಿದರು.ತಾಲೂಕಿನ ಸಮಖೇಡ ತಾಂಡಾದಲ್ಲಿಂದು ಅಂಗನವಾಡಿ ಕೇಂದ್ರವನ್ನು ನವೀಕರಣಗೊಳಿಸಿ ಉದ್ಘಾಟಿಸಿ ಮಾತನಾಡಿದ ಅವರು ಸರ್ಕಾರಿ ಶಾಲೆಗಳ ಸಬಲೀಕರಣ ಹಾಗೂ ಮಕ್ಕಳಲ್ಲಿ ವೈಜ್ಞಾನಿಕ ಮನೋಭಾವ ಮೂಡಿಸಲು ನಮ್ಮ ಸಿಎಸ್ಆರ್ ವಿಭಾಗವು ಸದಾ ಕಾರ್ಯಪ್ರವೃತ್ತವಾಗಿರುತ್ತದೆ. ಗುಣಮಟ್ಟದ ಶಿಕ್ಷಣ ಸಿಕ್ಕಾಗ ಮಾತ್ರ ಸಮಾಜದಲ್ಲಿ ಸಮಾನತೆ ಮತ್ತು ಪ್ರಗತಿ ಸಾಧ್ಯ ಎಂದು ಚೇತನ್ ವಾಘ್ಮೋರೆ ಆಶಯ ವ್ಯಕ್ತಪಡಿಸಿದರು. ಮಾಜಿ ಗ್ರಾಮ್ ಪಂಚಾಯತ್ ಅಧ್ಯಕ್ಷರಾದ ರಾಜಶೇಖರ ಪೂರಾಣಿಕ ಮಾತನಾಡಿ ಸಿಎಸ್ ಆರ್ ವಿಭಾಗದಿಂದ ಶೈಕ್ಷಣಿಕವಾಗಿ ಹಲವಾರು ರೀತಿಯ ಅಭಿವೃದ್ಧಿ ಕಾರ್ಯಗಳು ಮಾಡುತ್ತಿರುವುದು ಸಂತಸ ತಂದಿದೆ ಇದರ ಜೊತೆಗೆ ಮಳಖೇಡ ಗ್ರಾಮದಲ್ಲಿರುವ ಅಂಗನವಾಡಿ ಕೇಂದ್ರಗಳು ಪ್ರಾಥಮಿಕ ಪ್ರೌಢ ಶಾಲೆಗಳು ಇನ್ನು ಹೆಚ್ಚಿನ ರೀತಿಯ ಅಭಿವೃದ್ಧಿ ಕಾರ್ಯಗಳು ಮಾಡುವ ಪ್ರಯತ್ನ ನಿರಂತರ ವಿರಲಿ ಎಂದರು. ಸಿಡಿಪಿಒ ಶ್ರೀಮತಿ ಅನುರಾಧಾ ಎಸ್ ಪಾಟೀಲ್ ಮಾತನಾಡಿ ಅಂಗನವಾಡಿ ಕೇಂದ್ರಗಳ ನವೀಕರಣ ಹಾಗೂ ಮೂಲಭೂತ ಸೌಕರ್ಯ ಒದಗಿಸುವ ಪ್ರಯತ್ನ ನಿಮ್ಮ ಕಂಪನಿಯಿಂದ ಮಾಡುತ್ತಿರುವುದು ಸಂತಸ ತಂದಿದೆ ಜೊತೆಗೆ ಇನ್ನೂ ಹೆಚ್ಚಿನ ಅಂಗನವಾಡಿ ಕೇಂದ್ರಗಳ ಅಭಿವೃದ್ಧಿಗೆ ನಿಮ್ಮ ಸಹಕಾರ ಅಗತ್ಯವಿದೆ ಎಂದರು. ಈ ವೇಳೆಯಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಇಂದುಮತಿ,ಹಾಗೂ ಕಂಪನಿಯ ಸಿಎಸ್ಆರ್ ವಿಭಾಗದ ಅಶ್ವಿನಿ ಜಾಧವ, ವೀರಶೈವ ಲಿಂಗಾಯತ ಮಹಾಸಭಾ ಗ್ರಾಮ ಘಟಕದ ಅಧ್ಯಕ್ಷರಾದ ದೇವೇಂದ್ರಪ್ಪ ಹಳಿಜೋಳ, ತಾಂಡದ ಪ್ರಮುಖರಾದ ಗೋವಿಂದ ಚವಾಣ್, ರಾಜಶೇಖರ, ಕಂಪನಿಯ ಸಿಬ್ಬಂದಿ ಕಾಶಿಬಾಯಿ ಮತ್ತು ದೀಪಕ, ಪೌಂಡೇಶನ ನ ಶರಣು ಮತ್ತು ಜಗದೇವಿ ಹಾಗೂ ಅಂಗನವಾಡಿ ಕೇಂದ್ರಕ್ಕೆ ಕಲರ್ ಮಾಡಿರುವ ರಮೇಶ್ ಆರ್ಟ್ಸ್,ರಾಮು, ಪತ್ರಕರ್ತ ಸುರೇಶ್ ಬಿಜನಳ್ಳಿ ಸೇ–ರಿದಂತೆ ಹಲವರು ಉಪಸ್ಥಿತರಿದ್ದರು

# ಸಂವಿಧಾನವನ್ನೇ ನಾಶ ಮಾಡುವ ಮನಸುಳ್ಳವರು ಅಧಿಕಾರ ಅನುಭವಿಸುತ್ತಿದ್ದಾರೆ : ಡಿ.ಜಿ.ಸಾಗರ



ಕಲಬುರಗಿ: ಸಂವಿಧಾನವನ್ನೇ ನಾಶ ಮಾಡುವ ಸನಾತನಿ ಸಂಸ್ಕೃತಿ ಪ್ರತಿಪಾದನೆ ಮಾಡುವ ಪಟ್ಟಭದ್ರ ಮನಸುಳ್ಳವರು ಅಧಿಕಾರ ಕೇಂದ್ರದಲ್ಲಿ ಕುಳಿತ್ತಿದ್ದಾರೆ. ಎನ್ ಆರ್ ಸಿ, ಎಸ್ ಐ ಆರ್ ಅಂತಃ ಕೆಟ್ಟ ಆಲೋಚನಾ ಕಾನೂನುಗಳ ಮೂಲಕ ದಲಿತ ಮತ್ತು ಬಡ ಹಿಂದುಳಿದ ಸಮುದಾಯಗಳ ಹಕ್ಕುಗಳಿಗೆ ಸಂಚಕಾರ ರೂಪಿಸುತ್ತಿದ್ದಾರೆ ಎಂದು ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿಯ ರಾಜ್ಯ ಸಂಚಾಲಕ ಡಿ ಜಿ ಸಾಗರ ಹೇಳಿದರು. ಖಿಡಿಚಿತ–ಜಟಉಣುಜಥ &

ಗುಲ್ಬರ್ಗಾ ವಿಶ್ವವಿದ್ಯಾಲಯ ಕನ್ನಡ ವಿಭಾಗದ ಹ–ರಿಹರ ಸಭಾಂಗಣದಲ್ಲಿ ಕೌದಿ ಪ್ರಕಾಶನ ಮತ್ತು ಕನ್ನಡ ಅಧ್ಯಯನ ಸಂಸ್ಥೆಯ ಸಹಯೊಗದಲ್ಲಿ ಡಾ. ಪಿ. ನಂದಕುಮಾರ್ ರಚಿಸಿರುವ ಕಾಲದ ಕಟ್ಟಳೆ ಮೀರಿ ಕೃತಿ ಬಿಡುಗಡೆ ಸಮಾರಂಭದಲ್ಲಿ ಕೃತಿ ಲೋಕಾರ್ಪಣೆಗೊಳಿಸಿ ಮಾತನಾಡಿದರು.

ಜನ ಸಮುದಾಯಗಳನ್ನು ಹೆಚ್ಚಾಗಿ ಜಾಗೃತ ಮಾಡಲು ಬರಹಗಳ ಮೂಲಕ ಮಾತ್ರ ಸಾಧ್ಯ. ಕೃತಿಯ ಕುರಿತು ಮಾನಾಡುತ್ತ ಇಡೀ ಕೃತಿಯು ಹೋರಾಟದ ಕುದಿಯನ್ನು ಕಾಪಿಟ್ಟುಕೊಳ್ಳುವುದರ ಮೂಲಕ ಜೀವಂತವಾಗಿದೆ ಎಂದರು.

ಮುಖ್ಯಥಿತಿಯಾಗಿ ಪಾಲ್ಗೊಂಡಿದ್ದ ಅಮೃತರಾವ್ ಹಿರೇಮನಿ ಮಾತನಾಡಿ, ಬದುಕನ್ನು ಪ್ರತಿನಿಧಿಸುವ ಬರಹಗಳು ಹೆಚ್ಚು ಬರಬೇಕು. ಅಲ್ಲದೆ ಪಿ ನಂದಕುಮಾರ ಅವರು ಇನ್ನು ಹೆಚ್ಚಿನ ಕೃಷಿಯನ್ನು ಸಾಹಿತ್ಯದಲ್ಲಿ ಮಾಡಬೇಕು ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಕನ್ನಡ ಅದ್ಯಯನ ಸಂಸ್ಥೆಯ ನಿರ್ದೇಶಕ ಪ್ರೊ. ಎಚ್ ಟಿ ಪೋತೆ ಮಾತನಾಡಿ, ಕೆಲ ವ್ಯಕ್ತಿತ್ವದ ಒಡನಾಟದ ಮೂಲಕ ಕಲಿಯಬೇಕಾದ ಅನೇಕ ಸಂಗತಿಗಳಿವೆ. ಹೀಗಾಗಿ ದಲಿತ ಚಳವಳಿಯ ಪ್ರಜ್ಞೆಯಲ್ಲಿ ಕೆಲಸ ಮಾಡಿದ ಮಹನನೀಯರ ಓದು ಮುಖ್ಯ ಎಂದರು

ಸಿಂಡಿಕೆಟ್ ಸದಸ್ಯ ಎಸ್ ಪಿ ಸುಳ್ಳದ್, ಅಶೋಕ ಅಂಬಲಿಗಿ, ಎಚ್ ಶಂಕರ, ಬಿ ಸಿ ವಾಲಿ. ಅಂಬಣ್ಣ ಜಿವಣಗಿ, ದತ್ತಾತ್ರೇಯ ಇಕ್ಕಳಕಿ, ಕೇಂದ್ರೀಯ ವಿಶ್ವವಿದ್ಯಾಲಯದ ಪ್ರಾದ್ಯಾಪಕ ಪ್ರೊ ವಿಕ್ರಮ್ ವಿಸಾಜಿ, ಡಾ ಕಿರಣ ಗಾನಜೂರು ಸಾಹಿತಿ ಡಾ ಸೂರ್ಯಕಾಂತ ಸುಜ್ಯಾತ, ಶ್ರೀಶೈಲ ನಾಗರಾಳ, ದಲಿತ ಮುಖಂಡ ಸುರೇಶ ಹಾದಿಮನಿ ಹಾಗೂ ಕಲಾ ನಿಕಾಯದ ಎಲ್ಲ ಅಥಿತಿ ಉಪನ್ಯಾಸಕ ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ಡಾ. ಎಂ. ಬಿ. ಕಟ್ಟಿ ಸ್ವಾಗತಿಸಿದರು. ಡಾ. ಕಿರಣ ವಲ್ಲೇಪುರಿ ನಿರೂಪಿಸಿದರು. ಸಿದ್ಧಾರ್ಥ ಚಿಮ್ಮಿಲ್ದಾಯಿ ಕ್ರಾಂತಿಗೀತೆ ಹಾಡಿದರು, ರಾಹುಲ ವಂದನಾರ್ಪಣೆ ಮಾಡಿದರು.

# ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ :ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಗೆ ವಂತಿಕೆ ಪಾವತಿಸುವ ಸಂಘಟಿ-ತ ಕಾರ್ಮಿಕರ ಮಕ್ಕಳಿಗೆ 2026- 27ನೇ ಸಾಲಿನ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪ್ರಸ್ತುತ ಸ್ನಾತಕೋತ್ತರ, ಪದವಿ, ವೈದ್ಯಕೀಯ ಹಾಗೂ ಇಂಜಿನಿಯರಿಂಗ್ ಶಿಕ್ಷಣ ಪಡೆಯುತ್ತಿರುವ ಅರ್ಹ ವಿದ್ಯಾರ್ಥಿಗಳು ಈ ಸೌಲಭ್ಯವನ್ನು ಪಡೆದುಕೊಳ್ಳಲು ಮುಂಬರುವ ಡಿಸೆಂಬರ್ 31 ರೊಳಗೆ ಅರ್ಜಿ ಸಲ್ಲಿಸಲು ಕಾಲಾವಕಾಶ ನೀಡಲಾಗಿದೆ.

ಈ ಯೋಜನೆಯಡಿ ಸೌಲಭ್ಯ ಪಡೆಯಲು ಕೆಲವು ಪ್ರಮುಖ ಅರ್ಹತೆಗಳನ್ನು ನಿಗದಿಪಡಿಸಲಾಗಿದ್ದು, ಅರ್ಜಿ ಸಲ್ಲಿಸುವ ಕಾರ್ಮಿಕ ಪೋಷಕರ ಮಾಸಿಕ ವೇತನವು 35,000 ರೂ. ಮೀರಿರಬಾರದು. ಇದರೊಂದಿಗೆ ಒಂದೇ ಕುಟುಂಬದ ಒಬ್ಬ ವಿದ್ಯಾರ್ಥಿಗೆ ಮಾತ್ರ ಈ ಶೈಕ್ಷಣಿಕ ಧನಸಹಾಯ ಲಭ್ಯವಿರಲಿದ್ದು, ಸಾಮಾನ್ಯ ವರ್ಗದ ವಿದ್ಯಾರ್ಥಿ ಶೇಕಡಾ 50 ರಷ್ಟು ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವರ್ಗದವರಾಗಿದ್ದರೆ ಶೇಕಡಾ 45 ರಷ್ಟು ಅಂಕಗಳೊಂದಿಗೆ ಉತ್ತೀರ್ಣರಾಗಿರುವುದು ಕಡ್ಡಾಯವಾಗಿದೆ.

ಅರ್ಹಹಾಗೂಆಸಕ್ತವಿದ್ಯಾರ್ಥಿಗಳುಮಂಡಳಿಯ ಅಧಿಕೃತ ವೆಬ್‌ಸೈಟ್ www.klwbapps.karnataka.gov.in ಮೂಲಕ ಆನ್‌ಲೈನ್‌ನಲ್ಲಿ ತಮ್ಮ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಈ ಪ್ರೋತ್ಸಾಹ ಧನ ಯೋಜನೆಗೆ ಸಂಬಂಧಿಸಿದಂತೆ

ಹೆಚ್ಚಿನ ಮಾಹಿತಿ ಅಥವಾ ಗೊಂದಲಗಳಿದ್ದಲ್ಲಿ ಬೆಂಗಳೂರಿನ ಯಶವಂತಪುರದ ಮತ್ತಿಕೆರೆ ಮುಖ್ಯರಸ್ತೆಯಲ್ಲಿರುವ ಕಾರ್ಮಿಕ ಕಲ್ಯಾಣ ಭವನದ ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ ಕಚೇರಿಗೆ ಖುದ್ದಾಗಿ ಭೇಟಿ ನೀಡಬಹುದು. ಇಲ್ಲವೇ ಕಚೇರಿಯ ದೂರವಾಣಿ ಸಂಖ್ಯೆಗಳಾದ 080-23475188, 8277291175, 8277120505, 9141585402 ಹಾಗೂ 9141602562 ಅನ್ನು ಸಂಪರ್ಕಿಸಿ ಅಗತ್ಯ ಮಾಹಿತಿ ಪಡೆದುಕೊಳ್ಳಬಹುದೆಂದು ಕಾರ್ಮಿಕ ಅಧಿಕಾರಿಗಳು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಸರ್ಕಾರಿ ಶಾಲಾ ಮಕ್ಕಳಿಗೆ ಉಚಿತ ನೋಟಬುಕ್ ವಿತರಣೆ




■ ಉದಯರಶ್ಮಿ ದಿನಪತ್ರಿಕೆ

ಎಚ್ ಡಿ ಕೋಟೆ: ಕನ್ನಡ ರಾಷ್ಟ್ರೀಯ ಶಿಕ್ಷಣ ಒಕ್ಕೂಟದ ವತಿಯಿಂದ ತಾಲೂಕಿನ ಅಂಕನಾಥ-'ಪುರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಮಕ್ಕಳಿಗೆ ಉಚಿತವಾಗಿ ನೋಟ್ ಬುಕ್ ಹಾಗೂ ಕಲಿಕಾ ಸಾಮಗ್ರಿಗಳನ್ನು ನೀಡಲಾಯಿತು.

ತಾಲೂಕಿನ ನಿರ್ದೇಶಕ ಶಿವಕುಮಾರ ಮಾತನಾಡಿ, ಸರ್ಕಾರಿ ಶಾಲೆಯಲ್ಲಿ ಓದುವ ಗ್ರಾಮೀಣ ಪ್ರದೇಶದ ಮಕ್ಕಳ ಶೈಕ್ಷಣಿಕ ಪ್ರಗತಿಗಾಗಿ ಉಚಿತವಾಗಿ ವಿದ್ಯಾರ್ಥಿಗಳಿಗೆ ನೋಟ್‌ಬುಕ್, ಪೆನ್ನು, ಪೆನ್ಸಿಲ್‌ಗಳನ್ನು ವಿತರಣೆ ಮಾಡಿದ್ದೇವೆ. ವಿದ್ಯಾರ್ಥಿಗಳು ಇದರ ಸೌಲಭ್ಯಗಳನ್ನು ಸದ್ಬಳಕೆ ಮಾಡಿಕೊಂಡು ಶೈಕ್ಷಣಿಕವಾಗಿ ಪ್ರಗತಿ ಸಾಧನೆ ಮಾಡಿ ಸಮಾಜಕ್ಕೆ ಉತ್ತಮ ಪ್ರಜೆಗಳಾಗಿ ಹೊರಹೊಮ್ಮಬೇಕು. ಪ್ರತಿಯೊಬ್ಬ ವಿದ್ಯಾರ್ಥಿಗಳಲ್ಲೂ ಪ್ರತಿಭೆ ಇರುತ್ತದೆ. ಅದನ್ನು ಗುರುತಿಸುವ ಕೆಲಸವನ್ನು ಶಿಕ್ಷಕರು, ಮನೆಯಲ್ಲಿ ಪೋಷಕರು ಮಾಡಬೇಕು, ಗ್ರಾಮೀಣ ಪ್ರದೇಶದ ಸರ್ಕಾರಿ ಶಾಲೆಯಲ್ಲಿ ಓದುವ ಮಕ್ಕಳಲ್ಲೂ ಸಹ ಹೆಚ್ಚಿನ ಪ್ರತಿಭೆ ಇರುತ್ತದೆ ಅವ-ರಿಗೆ ಸೂಕ್ತವಾದ ಮಾರ್ಗದರ್ಶನ ನೀಡಬೇಕು. ಸಂಘ-ಸಂಸ್ಥೆ, ದಾನಿಗಳು ನೀಡುವ ಕೊಡುಗೆಗಳನ್ನು ಸದ್ಬಳಕೆ ಮಾಡಿಕೊಂಡು ಜೀವನದಲ್ಲಿ ಸಾಧನೆ ಮಾಡಬೇಕು, ಆ ಮೂಲಕ ತಮ್ಮ ಉಜ್ವಲ ಭವಿಷ್ಯದ ಜತೆಗೆ ಸಮಾಜಕ್ಕೂ ಕೊಡುಗೆಯಾಗಬೇಕು ಎಂದು ಕಿವಿಮಾತು ಹೇಳಿದರು. ಈ ಸಂದರ್ಭದಲ್ಲಿ ಡಾ. ಅಚ್ಚುತರಾವ್, ವೆಂಕಟೇಶ್ ಬಾಬು, ರಾಧಾ ಸೇ-ರಿದಂತೆ ಶಾಲಾ ಮುಖ್ಯಪಾಧ್ಯಾಯರು, ಶಿಕ್ಷಕರು, ಮಕ್ಕಳು ಹಾಜರಿದ್ದರು.

# ಮಳೆಗಾಗಿ ಗ್ರಾಮಸ್ಥರಿಂದ ಗುರ್ಜಿ ಪೂಜೆಗೆ ಮೊರೆ



■ ಉದಯರಶ್ಮಿ ದಿನಪತ್ರಿಕೆ

ಕೊಲ್ಹಾರ: ತಾಲೂಕಿನ ಸಿದ್ದನಾಥ ಗ್ರಾಮದಲ್ಲಿ ಮಂಗಳವಾರ ಮಳೆಗಾಗಿ ಗ್ರಾಮಸ್ಥರು ಗುರ್ಜಿ ಪೂಜೆಗೆ ಮೊರೆ ಹೋಗಿದ್ದು, ಗ್ರಾಮದಲ್ಲಿ ವಿಶೇಷ ಪೂಜೆ ಸಲ್ಲಿಸಿದರು.

ವಿಜಯಪುರ ಜಿಲ್ಲೆಯ ಕೆಲ ಗ್ರಾಮಗಳಲ್ಲಿ ಇದುವರೆಗೂ ಸಮರ್ಪಕ ಮಳೆಯಾಗದೇ ಇರುವುದರಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಬಿತ್ತಿದ ಬೆಳೆಗಳ ಭವಿಷ್ಯ ಏನು ಎಂಬ ಆತಂಕ ರೈತರನ್ನು ಕಾಡುತ್ತಿದೆ. ಈ ಹಿನ್ನೆಲೆಯಲ್ಲಿ ಮಳೆಯಿಗಾಗಿ ಗ್ರಾಮಸ್ಥರು ಪಾರಂಪರಿಕ ಗುರ್ಜಿ ಪೂಜೆಯನ್ನು ನೆರವೇರಿಸಿದರು.

ಮಳೆ ಬಾರದೆ ಇದ್ದಾಗ ಪೂರ್ವಜರ ಕಾಲದಿಂದಲೂ ಗ್ರಾಮೀಣ ಪ್ರದೇಶಗಳಲ್ಲಿ ಶತಮಾನಗಳಿಂದ ಆಚರಣೆಯಲ್ಲಿರುವ ಈ ಗುರ್ಜಿ ಪೂಜೆ ವಿಶಿಷ್ಟವಾಗಿದೆ. ಈ ಪೂಜೆಯಲ್ಲಿ ವ್ಯಕ್ತಿ ಅಥ-'ವಾ ಬಾಲಕನ ತಲೆಯ ಮೇಲೆ ತವೆ ಇಟ್ಟು, ಅದರ ಮೇಲೆ ಆಕಳ ಸಗಣಿಯಿಂದ ತಯಾರಿಸಿದ ಗುರ್ಜಿ ಇಡಲಾಗುತ್ತದೆ.

ನಂತರ, ಗುರ್ಜಿ ಹೊತ್ತ ವ್ಯಕ್ತಿಯ ಹಿಂದೆ ಗ್ರಾಮಸ್ಥರು “ಗುರ್ಜಿ ಗುರ್ಜಿ ಯಲ್ಲಾಡಿ ಬಂದಿ, ಹಳ್ಳ ಕೊಳ್ಳ ತಿರಗಾಡಿ ಬಂದಿ, ಬಾ ಮಳಿಯ ಬಾ ಮಳಿಯ” ಎಂದು ಹಾಡುತ್ತಾ ಗ್ರಾಮದ ಪ್ರತಿಯೊಂದು ಮನೆ ಮುಂದೆ ತೆರಳಿ ನಿಲ್ಲುತ್ತಾರೆ. ಮನೆಮಂದಿ ಬಂದು ಗುರ್ಜಿ ಹೊತ್ತವನ ತಲೆಯ ಮೇಲೆ ನೀರು ಸುರಿದು ಪೂಜೆ ಮಾಡುತ್ತಾರೆ. ಈ ರೀತಿ ಪೂಜೆ ಮಾಡಿದರೆ ಮಳೆ ಬರುತ್ತದೆ ಎಂಬ ನಂಬಿಕೆ ಗ್ರಾಮಸ್ಥರಲ್ಲಿದೆ.

ಈ ಸಂದರ್ಭದಲ್ಲಿ ಪರಸಪ್ಪ ಕಲಾದಗಿ, ಲಕ್ಷ್ಮಣ ಕಲಾದಗಿ, ಗಣೇಶ ಮಾದರ (ಗುರ್ಜಿ), ಲಾಲಾಸಬ್ ಮುಲ್ಲಾ, ದುರಗಪ್ಪ ಮಾದರ, ಶ್ರೀಶೈಲ ಗುಂಡನಪಲ್ಲೇ, ಸೋಮಲಿಂಗ ಮಾದರ, ಲಕ್ಕಪ್ಪ ಶಿರಬೂರ ಹಾಗೂ ಹಣಮಂತ ಕೋಳಮಲಿ ಉಪಸ್ಥಿತರಿದ್ದರು.

# ದಂಡ ವಿನಾಯಿತಿ ಖಾಸಗಿ ಕಾಲೇಜು ವಿದ್ಯಾರ್ಥಿಗಳಿಗೂ ವಿಸ್ತರಿಸಿ:

ಕಲಬುರಗಿ: ಪಿಯುಸಿ ವಿಳಂಬ ದಾಖಲಾತಿ ದಂಡ ವಿನಾಯಿತಿ ಆದೇಶಕ್ಕೆ ಕರ್ನಾಟಕ ರಾಜ್ಯ ಶಾಲಾ ಶಿಕ್ಷಣ ಇಲಾಖೆ ನೌಕರರ ಸಂಘ ಸ್ವಾಗತಿಸಿದೆ.

(06-07-2026 ಶಾಲಾ ಶಿಕ್ಷಣ ಇಲಾಖೆಯ ಆದೇಶದಂತೆ )ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ 1ನೇ ಮತ್ತು 2ನೇ ಪಿಯುಸಿಗೆ ವಿಳಂಬವಾಗಿ ಸೇರುವ ವಿದ್ಯಾರ್ಥಿಗಳಿಗೆ 670 ರೂ. ವಿಳಂಬ ಶುಲ್ಕ ಮತ್ತು 2220 ರೂ. ವಿಶೇಷ ದಂಡದಿಂದ ಸಂಪೂರ್ಣ ವಿನಾಯಿತಿ ನೀಡಲಾಗಿದೆ. ಸರ್ಕಾರದ ನಿರ್ಧಾರ ಸ್ವಾಗತಾರ್ಹ. ಇದ-ರಿಂದ ಆರ್ಥಿಕವಾಗಿ ಹಿಂದುಳಿದ ಸಾವಿರಾರು ವಿದ್ಯಾರ್ಥಿಗಳಿಗೆ ಅನುಕೂಲವಾಗಲಿದೆ. ಆದ-'ರೆ ಅನುದಾನಿತ ಮತ್ತು ಖಾಸಗಿ ಕಾಲೇಜುಗಳ ವಿದ್ಯಾರ್ಥಿಗಳಿಗೂ ಇದೇ ವಿನಾಯಿತಿ ವಿಸ್ತರಿಸಬೇಕು ಎಂದು ಸಂಘದ ರಾಜ್ಯ ಉಪಾಧ್ಯಕ್ಷ ಈರನಗೌಡ ಕೆ ಪಾಟೀಲ ರಾಜ್ಯ ಸರ್ಕಾರಕ್ಕೆ ಮನವಿ ಮಾಡಿದ್ದಾರೆ.

# ಡಾ.ಹಳಕಟ್ಟಿಯವರಿಂದ ವಚನ ಸಾಹಿತ್ಯದ ಸಮಗ್ರ ದರ್ಶನ :ಡಾ.ಮದಭಾವಿ

## ವಚನ ಪಿತಾಮಹ ಡಾ. ಫ.ಗು. ಹಳಕಟ್ಟಿ ಅವರ ‘ಶಿವಾನುಭವ’ ಪತ್ರಿಕೆಯ ಜನ್ಮ ಶತಮಾನೋತ್ಸವ ವರ್ಷ

■ ಉದಯರಶ್ಮಿ ದಿನಪತ್ರಿಕೆ




ವಿಜಯಪುರ: 12ನೇ ಶತಮಾನದ ಬಸವಾದಿ ಶರಣರ ವಚನಗಳನ್ನು ಡಾ. ಫ.ಗು. ಹಳಕಟ್ಟಿ ಅವರು ಸಂಪಾದಿಸಿ ಪ್ರಕಟಿಸುತ್ತಿದ್ದ ‘ಶಿವಾನುಭವ’ ಪತ್ರಿಕೆಯ ಜನ್ಮಶತಮಾನೊತ್ಸವ ವರ್ಷವಿದು, ವಚನ ಸಾಹಿತ್ಯವನ್ನು ಸಂಗ್ರಹಿಸಿ, ಸಂಪಾದಿಸಿ ಪ್ರಕಟಿಸದೇ ಹೋಗಿದ್ದರೆ ವಚನ ಸಾಹಿತ್ಯದ ಸಮಗ್ರ ದರ್ಶನ ನಮಗಾಗುತ್ತಿರಲಿಲ್ಲ ಎಂದು ಫ. ಗು. ಹಳಕಟ್ಟಿ ಸಂಶೋಧನಾ ಕೇಂದ್ರದ ಕಾರ್ಯದರ್ಶಿ ಡಾ. ಎಂ.ಎಸ್. ಮದಭಾವಿ ಹೇಳಿದರು.

ಅಖಿಲ ಭಾರತ ವೀರಶೈವ ಲಿಂಗಾಯತ ಸಾಂಸ್ಕೃತಿಕ ಸಭಾಭವನದಲ್ಲಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆ ಜಿಲ್ಲಾ ಘಟಕದಿಂದ ಆಯೋಜಿಸಿದ್ದ 80ನೇ ಶಿವಾನುಭವ ಗೋಷ್ಠಿಯಲ್ಲಿ ಮಾತನಾಡಿದ ಅವರು ವಚನ ಪಿತಾಮಹ ಡಾ. ಫ.ಗು. ಹಳಕಟ್ಟಿ ಅವರು ತಮ್ಮ ಸಮಸ್ತ ಬದುಕನ್ನೆ ಶರಣ ಸಾಹಿತ್ಯದ ಪುನರುಜ್ಜೀವನಕ್ಕಾಗಿ ಮೀಸಲಿಟ್ಟು, ‘ಶಿವಾನುಭವ’ ಪತ್ರಿಕೆ ಮೂಲಕ ಮುವತ್ತೈದು ವರ್ಷಗಳ ಕಾಲ ಶರಣ ಸಾಹಿತ್ಯವನ್ನು ಅವ್ಯಾಹತವಾಗಿ ಪ್ರಕಟಿಸಿ ಕನ್ನಡ ಸಾಹಿತ್ಯದ ಶ್ರೀಮಂತಿಕೆಯನ್ನು ಹೆಚ್ಚು ಮಾಡಿದರು. ಶಿವಶರಣರ ತತ್ವಗಳ ಉದ್ದೇಶವು ಶಿವನ ಅನುಭವ ಅಂದರೆ ಶಿವನನ್ನು ಕಾಣುವುದು, ಅರಿಯುವುದೇ ಮುಖ್ಯ. ಶಿವಾನುಭವ ಪತ್ರಿಕೆಯನ್ನು ಎಂತಹ ಗಂಡಾಂತರ ಬಂದರೂ ನಿಲ್ಲಿಸದೇ ಪ್ರಕಟಿಸಿದ್ದು ಅವರ ಶರಣ ಶ್ರದ್ಧೆಗೆ ಹಿಡಿದ ಕನ್ನಡಿ ಪತ್ರಿಕೆಯು ಕನ್ನಡ ಧಾರ್ಮಿಕ, ಸಾಹಿತ್ಯಿಕ ಮತ್ತು ಸಾಂಸ್ಕೃತಿಕ ಕ್ಷೇತ್ರಗಳಲ್ಲಿ ಮಹತ್ವದ ಸ್ಥಾನವನ್ನು ಪಡೆದಿತ್ತು. ಉನ್ನತ ತತ್ವ ಪ್ರಚಾರ, ಧಾರ್ಮಿಕ ಚಿಂತನೆ ಸಾಹಿತ್ಯಿಕ ಅರಿವು ಹಾಗೂ ಸಾಂಸ್ಕೃತಿಕ ಜಾಗೃತಿಯನ್ನು ಧ್ಯೇಯವನ್ನಾಗಿ ಮಾಡಿಕೊಂಡ ಪತ್ರಿಕೆಯು ಕನ್ನಡಿಗರಿಗೆ ಅಪಾರ ಜ್ಞಾನ ಸಂಪತ್ತು ಒದಗಿಸಿತು. ಅವರೊಬ್ಬ 20ನೇ ಶತಮಾನದ ಸಂತ ಎಂದು ಹೇಳಿದರು.

ಮಹಾಸಭೆಯ ಜಿಲ್ಲಾಧ್ಯಕ್ಷ ವಿ.ಸಿ. ನಾಗಠಾಣ ಮಾತನಾಡಿ ಡಾ. ಫ.ಗು. ಹಳಕಟ್ಟಿ ಅವರ ನೆಲ, ಜಲ, ನುಡಿ ಮೇಲಿರುವ ಅಭಿಮಾನ, ಬಡತನ ಆರೋಗ್ಯವನ್ನು ಕಾಪಾಡದೆ ವಚನ ಸಾಹಿತ್ಯವನ್ನು ಸಂಗ್ರಹಿಸಿದ ಮೊದಲಿಗರು. ಧಾರ್ಮಿಕ ಸಾಮಾಜಿಕವಾಗಿ ನಿಸ್ವಾರ್ಥದಿಂದ ತೊಡಗಿಸಿ ಕೊಂಡವರು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯ ಸಂಸ್ಥಾಪಕ ಅಧ್ಯಕ್ಷರಾಗಿದ್ದರು ಎಂದರು.

ಇದೇ ಸಂದರ್ಭದಲ್ಲಿ 2026ರ ನಾಡಪ್ರಭು ಕೆಂಪೆಗೌಡ ಪ್ರಶಸ್ತಿಗೆ ಭಾಜನರಾದ ಬಿ.ಎಮ್. ಕೊಕರೆ ಅವರನ್ನು ಮಹಾಸಭೆಯ ಪದಾಧಿಕಾರಿಗಳು ಸನ್ಮಾನಿಸಿದರು.

ಅಪ್ಪಾಸಾಹೇಬ ಕೋರಿ,ನೂತನ ಬ್ಯಾಕೊಡ ವಚನಗೀತೆ ಪ್ರಸ್ತುತ ಪಡಿಸಿದರು. ಮಹಾಸಭೆಯ ಕಾರ್ಯದರ್ಶಿ ಬಿ.ಟಿ. ಈಶ್ವರಗೊಂಡ ಸ್ವಾಗತಿಸಿದರು. ಸಾಹಿತಿ ಸಂಗಮೇಶ ಬದಾಮಿ ನಿರೂಪಿಸಿದರು. ಮಹಾಸಭೆಯ ಉಪಾಧ್ಯಕ್ಷ ಸಹದೇವ ನಾಡಗೌಡರ ವಂದಿಸಿದರು.

ಕಾರ್ಯಕ್ರಮದಲ್ಲಿ ಡಾ. ಎಸ್.ಕೆ. ಕೊಪ್ಪ, ರವೀಂದ್ರ ಬ್ಯಾಕೋಡ, ಭಾರತಿ ಬುಯ್ಯಾರ, ಮಹಾದೇವ ಹಾಲಳ್ಳಿ, ವಿಠ್ಠಲ ತೇಲಿ, ಮಲ್ಲಿಕಾರ್ಜುನ ಅಮರಣ್ಣವರ, ಕಮಲಾ ಗೆಜ್ಜಿ, ಡಾ. ಸಂಗಮೇಶ ಮೇತ್ರಿ, ಡಾ. ಸೋಮಶೇಖರ ವಾಲಿ, ಜಗದೀಶ ಮೊಟಗಿ, ಎಸ್.ವಾಯ್. ಶಿವಣಗಿ ಬಸವರಾಜ (ಅಪ್ಪು) ಇಟ್ಟಂಗಿ ದೊಡ್ಡಣ್ಣ ಭಜಂತ್ರಿ, ಸುಭಾಸ ಬೆಟಗೇರಿ, ಶಶಿಧರ ಶಿರಹಟ್ಟಿ, ಹಾಗೂ ಶರಣರು ಶರಣೆಯರು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಎಸ್‌ಐಆರ್ ಕುರಿತು ವದಂತಿ ಹರಡಿದರೆ ಕಾನೂನು ಕ್ರಮ

## ವಿಜಯಪುರ ಮಹಾನಗರ ಪಾಲಿಕೆ ಆಯುಕ್ತ ವಿಜಯಕುಮಾರ ಮೆಕ್ಕಳಕಿ ಎಚ್ಚರಿಕೆ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಎಸ್ ಐಆರ್ ಗೆ ಸಂಬಂಧಿಸಿದಂತೆ ಇತ್ತೀಚಿಗೆ ಕೆಲವು ಸಾಮಾಜಿಕ ಜಾಲತಾಣಗಳಲ್ಲಿ ಬೇರೆ ಮತಕ್ಷೇತ್ರದಲ್ಲಿ ಮನೆ ಕಟ್ಟಿಕೊಂಡು ವಾಸವಿದ್ದರೂ ಎಸ್ ಐಆರ್ ಫಾರ್ಮನಲ್ಲಿ ಈ ಹಿಂದೆ ವಾಸವಿದ್ದ ತಮ್ಮ ಮೂಲ ಹಳೆಯ ಓಣಿಯ ವಿಳಾಸ ತುಂಬುವಂತೆ ತಿಳಿಸಿ ಪೋಸ್ಟ್ ಮಾಡಲಾಗುತ್ತಿದೆ. ಇದು ಕಾನೂನಿಗೆ ವಿರುದ್ಧವಾಗಿದ್ದು, ಅಂತಹ ವ್ಯಕ್ತಿಗಳನ್ನು ಕಠಿಣ ಶಿಕ್ಷೆಗೊಳಪಡಿಸಲಾಗುವುದು ಎಂದು ಮಹಾನಗರ ಪಾಲಿಕೆ ಆಯುಕ್ತ ವಿಜಯ ಮೆಕ್ಕಳಕಿ ತಿಳಿಸಿದ್ದಾರೆ.

ಈ ಕುರಿತು ಹೇಳಿಕೆ ನೀಡಿರುವ ಅವರು, ಪ್ರಜಾ ಪ್ರಾತಿನಿಧ್ಯ ಕಾಯ್ದೆ 1950 ರ ಕಲಂ 17 ರಂತೆ ಒಬ್ಬ ವ್ಯಕ್ತಿಯ ಹೆಸರು ಒಂದಕ್ಕಿಂತ ಹೆಚ್ಚು ಮತಕ್ಷೇತ್ರಗಳ ಮತದಾರರ ಪಟ್ಟಿಯಲ್ಲಿ ಇರಬಾರದು. ಕಲಂ 18 ರಂತೆ ಅರ್ಹತೆ ಇಲ್ಲದಿದ್ದರೂ ಅಥವಾ ತಪ್ಪು ಮಾಹಿತಿಯನ್ನು ನೀಡಿ ನೋಂದಣಿ ನಿಷೇಧಿಸಲಾಗಿದೆ. ಒಂದು ವೇಳೆ ಉದ್ದೇಶಪೂರ್ವಕವಾಗಿ ಮತದಾರರ ಪಟ್ಟಿಗೆ ಸಂಬಂಧಿಸಿದಂತೆ ಸುಳ್ಳು ಘೋಷಣೆ ಅಥವಾ ಸುಳ್ಳು ಮಾಹಿತಿ ನೀಡಿದರೆ ಸೆಕ್ಷನ್ 31 ರಡಿ ಗರಿಷ್ಠ 1 ವರ್ಷ ಶಿಕ್ಷೆ ಅಥವಾ ದಂಡ ಎರಡನ್ನೂ ವಿಧಿಸಲಾಗುವುದು ಎಂದವರು ತಿಳಿಸಿದ್ದಾರೆ. ಜೂ. 30 ರಿಂದ ಜು. 29 ರವರೆಗೆ ಮನೆ ಮನೆಗೆ ಗಣತಿ ನಮೂನೆ ವಿತರಿಸುವ ಸಂದರ್ಭದಲ್ಲಿ ತಾವು ಗಣತಿ ನಮೂನೆಯಲ್ಲಿ ತಮ್ಮ ಮತ್ತು ತಮ್ಮ ಕುಟುಂಬದ ಹೆಸರು ಬೇರೆ ಯಾವುದೇ ಇತರೆ ವಿಧಾನ ಸಭಾ ಕ್ಷೇತ್ರ ಅಥವಾ ಸಂಸದೀಯ ಮತದಾರರ ಪಟ್ಟಿಯಲ್ಲಿ ಸೇರಿರುವುದಿಲ್ಲವೆಂದು ಭರ್ತಿ ಮಾಡಿ ಸಲ್ಲಿಸಬೇಕಾಗಿರುತ್ತದೆ. ಆದ್ದರಿಂದ ತಾವು ತಪ್ಪು ಮಾಹಿತಿ ನೀಡಿ ಮತದಾರರ ಪಟ್ಟಿಯಲ್ಲಿ ನೋಂದಾಯಿಸಿಕೊಂಡಿದ್ದು ಕಂಡುಬಂದಲ್ಲಿ ಪ್ರಜಾ ಪ್ರಾತಿನಿಧ್ಯ ಕಾಯ್ದೆ 1950ರ (1950ರ 43ನೇ ಕಾಯ್ದೆ) ಕಲಂ 31 ರಂತೆ ಕಾನೂನು ರೀತ್ಯ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದವರು ತಿಳಿಸಿದ್ದಾರೆ.

ನಗರ ಮತಕ್ಷೇತ್ರದಲ್ಲಿ ಮತಗಟ್ಟೆ ಮಟ್ಟದ ಅಧಿಕಾರಿಗಳು ಮನೆ ಮನೆಗೆ ಭೇಟಿ ನೀಡುತ್ತಿದ್ದು, ಅವರು ದ್ವಿಪ್ರತಿಗಳಲ್ಲಿ ನೀಡುವ ಗಣತಿ ನಮೂನೆಗಳನ್ನು ಪ್ರತಿಯೊಬ್ಬ ಮತದಾರರು ಪಡೆದು, ಅವುಗಳನ್ನು ತಮ್ಮ ಸಹಿಯೊಂದಿಗೆ ಭರ್ತಿ ಮಾಡಿ, ಒಂದು ಪ್ರತಿಯನ್ನು ಬಿಎಲ್ ಒ ಅವರಿಗೆ ಕಡ್ಡಾಯವಾಗಿ ಹಿಂದಿರುಗಿಸಿ, ಇನ್ನೊಂದು ಪ್ರತಿಯನ್ನು ಅವರಿಂದ ಸ್ವೀಕೃತಿ ಪಡೆದು ಮತದಾರರು ತಮ್ಮ ಬಳಿ ಇಟ್ಟುಕೊಳ್ಳಬೇಕು ಎಂದು ಪಾಲಿಕೆ ಆಯುಕ್ತರು ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಗೈರು ಹಾಜರಾದವರು, ಸ್ಥಳಾಂತರಗೊಂಡವರು, ನಿಧನರಾದವರು ಮತ್ತು ಸಂಭವನೀಯ ನಕಲು ಮತದಾರರನ್ನು ಗುರುತಿಸುವುದು ಹಾಗೂ ಒಂದಕ್ಕಿಂತ ಹೆಚ್ಚು ಮತದಾರರ ಪಟ್ಟಿಯಲ್ಲಿ ಹೆಸರು ಇದ್ದಲ್ಲಿ ಒಂದು ಕಡೆ ಮಾತ್ರ ಹೆಸರು ಉಳಿಸುವ ಪ್ರಕ್ರಿಯೆ ಇದಾಗಿದೆ. ಯಾವುದೇ ಅರ್ಹ ಮತದಾರರು ಮತದಾರರ ಪಟ್ಟಿಯಿಂದ ಹೊರಗೆ ಉಳಿಯಬಾರದು ಮತ್ತು ಅನರ್ಹ ಮತದಾರರನ್ನು ಯಾವುದೇ ಕಾರಣಕ್ಕೂ ಮತದಾರರ ಪಟ್ಟಿಗೆ ಸೇರಬಾರದು ಎಂಬುದೇ ಈ ಪ್ರಕ್ರಿಯೆಯ ಮೂಲ ಉದ್ದೇಶವಾಗಿದೆ ಎಂದವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೊಲ್ಹಾರ ಪ್ರಾಥಮಿಕ ಆರೋಗ್ಯ ಕೇಂದ್ರ ಮೇಲ್ದರ್ಜೆಗೆ :ಕೊಪ್ಪಳ

■ ಉದಯರಶ್ಮಿ ದಿನಪತ್ರಿಕೆ

ಕೊಲ್ಹಾರ: 2025-26ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಲಾದಂತೆ ಕೊಲ್ಹಾರ ಪಟ್ಟಣದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರ (ಸಿ.ಎಚ್.ಸಿ)ವಾಗಿ ಮೇಲ್ದರ್ಜೆಗೆ ಏರಿಸಲಾಗಿದೆ. ಸರಕಾರದ ಆದೇಶ ಸಂಖ್ಯೆ ಆಕೂಕ 387 ಸಿಜೆಎಮ್ 2025, ದಿನಾಂಕ 04-07-2026ರ ಪ್ರಕಾರ ಇಂದಿನಿಂದ ಇದು ಸಮುದಾಯ ಆರೋಗ್ಯ ಕೇಂದ್ರವಾಗಿ ಕಾರ್ಯನಿರ್ವಹಿಸಲಿದೆ ಎಂದು ಶಾಸಕ ಶಿವಾನಂದ ಪಾಟೀಲರ ಆಪ್ತ ಸಹಾಯಕ ಈರಣ್ಣ ಕೊಪ್ಪಳ ತಿಳಿಸಿದ್ದಾರೆ.

ಗ್ರಾಮೀಣ ಪ್ರದೇಶಗಳ ಆರೋಗ್ಯ ವ್ಯವಸ್ಥೆಯನ್ನು ಬಲಪಡಿಸುವ ಉದ್ದೇಶದಿಂದ ರಾಷ್ಟ್ರೀಯ ಆರೋಗ್ಯ ಅಭಿಯಾನದ ಅನುದಾನದಲ್ಲಿ ನಿರ್ಮಿಸಲಾದ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೆ ಏರಿಸಲಾಗುತ್ತಿದೆ. ಇದರಡಿ ಕೊಲ್ಹಾರದಲ್ಲಿನ ಕೇಂದ್ರವನ್ನು 50 ಹಾಸಿಗೆ ಸಾಮರ್ಥ್ಯದ ಆಸ್ಪತ್ರೆಯಾಗಿ ಅಭಿವೃದ್ಧಿಪಡಿಸಲು ಅನುಮೋದನೆ ನೀಡಲಾಗಿದೆ.

ಈ ಆಸ್ಪತ್ರೆಯಲ್ಲಿ ತುರ್ತು ಚಿಕಿತ್ಸೆ, ಒಪಿಡಿ, ಒಬಿಜಿ ಸೇವೆಗಳು, ಔಷಧ ವಿತರಣೆ, ಅಲ್ಟ್ರಾಸೌಂಡ್, ಎಕ್ಸರೇ, ದಂತ ಚಿಕಿತ್ಸಾ ಘಟಕ, ನವಜಾತ ಶಿಶು ಆರೈಕೆ ಸೇ-ರಿದಂತೆ ವಿವಿಧ ಸೌಲಭ್ಯಗಳನ್ನು ಒದಗಿಸಲಾಗುತ್ತದೆ. ಜೊತೆಗೆ ಪುರುಷ ಮತ್ತು ಮಹಿಳಾ ವಾರ್ಡುಗಳು, ಸಣ್ಣ ಆಪರೇಷನ್ ಥಿಯೇಟರ್, ಆಡಳಿತ ಕಚೇರಿ ಮತ್ತು ಬಹುಉದ್ದೇಶ ಸಭಾಂಗಣ ಸೇರಿದಂತೆ ಅಗತ್ಯ ಮೂಲಸೌಕರ್ಯಗಳನ್ನು ನಿರ್ಮಿಸಲಾಗುತ್ತದೆ.

ಈ ಯೋಜನೆಗೆ ಒಟ್ಟು 5 ಕೋಟಿ 75 ಲಕ್ಷ ರೂಪಾಯಿ ವೆಚ್ಚಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವಾಗಿ ಮೇಲ್ದರ್ಜೆಗೆ ಏರಿಸಿರುವುದು ಹಾಗೂ ತಾಯಿ-ಮಕ್ಕಳ ಎಂಸಿಎಚ್ ಆಸ್ಪತ್ರೆ ಮಂಜೂ-ರಿಗೆ ಶಾಸಕ ಶಿವಾನಂದ ಪಾಟೀಲರ ಪ್ರಯತ್ನಕ್ಕೆ ಪಟ್ಟಣ ಹಾಗೂ ತಾಲೂಕಿನ ಜನರು ಅಭಿನಂದನೆ ಸಲ್ಲಿಸಿದ್ದಾರೆ.

# ಜೆಇಇಯಲ್ಲಿ ಸಾಧನೆಗೈದ ಇಂದಿರಾಬಾಯಿಗೆ ಸನ್ಮಾನ

■ ಉದಯರಶ್ಮಿ ದಿನಪತ್ರಿಕೆ



ತಾಳಿಕೋಟೆ: ನಗರದ ರಜಪೂತ ಸಮಾಜದ ಇಂದಿರಾಬಾಯಿ ಭವನಸಿಂಗ್ ಹಜೇರಿ ಜೆಇಇ ಪರಿಕ್ಷೆಯಲ್ಲಿ 227ನೇ ರ‍್ಯಾಂಕ್ ಪಡೆಯುವ ಮೂಲಕ ಉತ್ತಮ ಸಾಧನೆ ತೋರಿದ್ದಕ್ಕೆ ರಜಪೂತ ಸಮಾಜದ ವತಿಯಿಂದ ಸೋಮವಾರರಂದು ಸನ್ಮಾನಿಸಿ ಗೌರವಿಸಿ ಪ್ರೋತ್ಸಾಹಿಸಲಾಯಿತು.

ರಜಪೂತ ಸಮಾಜದ ಅಧ್ಯಕ್ಷ ಹರಿಸಿಂಗ್ ಮೂಲಿಮನಿ ಮಾತನಾಡಿ, ಇಂದಿರಾಬಾಯಿ ಭವನಸಿಂಗ್ ಹಜೇರಿ ಚಿಕ್ಕವಳಿದ್ದಾಗಿನಿಂದಲೂ ಶಿಕ್ಷಣದ ಮೇಲಿನ ತನ್ನ ಆಸಕ್ತಿ ಹೆಚ್ಚಿಸಿಕೊಳ್ಳುತ್ತಾ ಬಂದವಳಾಗಿದ್ದಳು. ಅವಳ ಓದಿನೊಂದಿಗೆ ಸಾಧಸಬೇಕೆಂಬ ಛಲ ದೇಶದ ಅತ್ಯುನ್ನತ ಪರೀಕ್ಷೆ ಜೆಇಇಯಲ್ಲಿ ದೇಶಕ್ಕೆ 227ನೇ ರ‍್ಯಾಂಕ್ ಪಡೆಯುವದರೊಂದಿಗೆ ಹೆತ್ತವರ ಮತ್ತು ಕಲಿಸಿದ ಶಿಕ್ಷಣ ಸಂಸ್ಥೆಯ ಜೊತೆಗೆ ರಜಪೂತ ಸಮಾಜದ ಹೆಸರನ್ನು ಬೆಳಗಿಸಿದ್ದಾಳೆ. ಅವರ ಈ ಸಾಧನೆ ಮುಂದುವರೆಯಲಿ ಮತ್ತು ಅವಳ ಛಲ ರಾಜ್ಯಕ್ಕೆ ಒಳ್ಳೆಯ ಕೊಡುಗೆಯಾಗಿ ಬೆಳೆಯಲಿ ಎಂದರು.

ರಜಪೂತ ಸಮಾಜದ ಉಪಾಧ್ಯಕ್ಷ ರತನಸಿಂಗ್ ಕೊಕಟನೂರ ಮಾತನಾಡಿ, ಇಂದಿರಾಬಾಯಿ ಹಜೇರಿ ಸಾಧನೆಯು ಯಾರ ಸ್ವತ್ತಲ್ಲಾವೆಂಬುದನ್ನು ತನ್ನ ಕಲಿಕೆಯ ಶಿಕ್ಷಣದ ಮೂಲಕ ತೋರಿಸಿಕೊಟ್ಟಿದ್ದಾಳೆ ಮತ್ತು ಇತರರಿಗೆ ಮಾದರಿಯಾಗಿದ್ದಾಳೆ. ಜೆಇಇ ಅತ್ಯುನ್ನತ ಪರಿಕ್ಷೆಯಲ್ಲಿ ಉತ್ತಮ ಸಾಧನೆ ತೋರಿ ಮಾದರಿಯ ಹಾದಿಯಲ್ಲಿ ಸಾಗಿರುವ ಇಂದಿರಾಬಾಯಿಯ ಕನಸ್ಸು ನನಸಾಗಲಿ ಎಂದು ಹಾರೈಸಿದರು.ಈ ಸಮಯದಲ್ಲಿ ರಜಪೂತ ಸಮಾಜದ ಮುಖಂಡರುಗಳಾದ ಭರತಸಿಂಗ್ ವಿಜಾಪೂರ, ರಘುರಾಮಸಿಂಗ್ ಹಜೇರಿ, ವಿಜಯಸಿಂಗ್ ಹಜೇರಿ, ಜಯಸಿಂಗ್ ಮೂಲಿಮನಿ, ವಿಠ್ಠಲಸಿಂಗ್ ಹಜೇ-ರಿ(ಬೇಕಿನಾಳ), ರಮೇಶ ಗೌಡಗೇರಿ, ನಾರಾಯಣಸಿಂಗ್ ಕೊಕಟನೂರ, ಅರುಣಸಿಂಗ್ ಧಡೇದ, ಸುರೇಶ ಹಜೇರಿ ಮೊದಲಾದವರು ಉಪಸ್ಥಿತರಿದ್ದರು.

# ಜು.10 ರಂದು ತರಬೇತಿ, ಇ-ಹರಾಜು

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಅಬಕಾರಿ ಇಲಾಖೆಯಲ್ಲಿ ಸ್ಥಗಿತಗೊಂಡಿರುವ ಹಾಗೂ ಮಂಜೂರಾಗದೇ ಬಾಕಿ ಇರುವ ನೋಂದಾಯಿತ ಬಿಡ್ಡದಾರರಿಗೆ ಜು. 10ರಂದು ಬಾಗಲಕೋಟೆಯ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ತರಬೇತಿ ಹಾಗೂ ಇ-ಹರಾಜು ಆಯೋಜಿಸಲಾಗಿದೆ.

ಪೋರ್ಟಲ್:https://www.mstcecommerce.com. ವಿಳಾಸದಲ್ಲಿ ಇ-ಹರಾಜಿಗೆ ನೋಂದಣಿ ಕಾರ್ಯ ಜು.3ರಿಂದ ಆರಂಭಗೊಂಡಿದೆ. ಈ ಸಂಬಂಧ ಅಧಿಸೂಚನೆಯಲ್ಲಿ ಸೂಚಿಸಿದ ಎಲ್ಲಾ ರೀತಿಯ ಶುಲ್ಕುಗಳು ಹಾಗೂ ಷರತ್ತುಗಳಿಗೆ ಒಳಪಟ್ಟು ಇಚ್ಛೆವುಳ್ಳ ವ್ಯಕ್ತಿ /ಸಂಸ್ಥೆ / ಕಂಪನಿ ಇತ್ಯಾದಿಯವರು ಭಾಗವಹಿಸಬಹುದಾಗಿದೆ ಎಂದು ಅಬಕಾರಿ ಉಪ ಆಯುಕ್ತರು ತಿಳಿಸಿದ್ದಾರೆ.

ಜಿಲ್ಲೆಗೆ ಸಂಬಂಧಿಸಿದಂತೆ ಭಾರತ ಸರ್ಕಾರದ ಸ್ವಾಮ್ಯದ ಸಂಸ್ಥೆಯಾದ ಎಂ-ಎಸ್‌ಟಿಸಿ ಲಿಮಿಟೆಡ್ ಇ-ಹೋಟೆಲ್‌ನಲ್ಲಿ ವಿಜೆಪಿ39/ಐಎನ್ ಡಿ228/ಸಿಎ2ಎ/001, ಬಸವನಬಾಗೇವಾಡಿ, ಗಿಎಕ39/IND228/CL2A/001, ಬಸವನಬಾಗೇವಾಡಿ, VJP39/BAS226/CL2A/001-ಜಿಇಎನ್, ಮುದ್ದೇಬಿಹಾಳ VJP39/MUD229/CL2A/001, ಸಿಂದಗಿ VJP39/SIN230/CL2A/00, ಬಸವನಬಾಗೇವಾಡಿ VJP39/BAS226/CL2A/002,ಮುದ್ದೇಬಿಹಾಳ VJP39/MUD229/CL2A/002, ಸಿಂದಗಿ VJP39/SIN230/C2A002 ಈ ಸಿಎಲ್-2(ಎ) ಸನ್ನದುಗಳÀ GEN ಮೀಸಲಾತಿಗಳಾಗಿದ್ದು ಇವುಗಳ ಬೇಸಿಕ್ ಪ್ರೈಸ್ ಇಂಡಿ 90 ಲಕ್ಷ, ಇಎಂಡಿ- 180000, ಉಳಿದ ಕ್ರ. ಸಂ:2 ರಿಂದ 7 ವರೆಗಿನ ಪ್ರತಿಯೊಂದು ಸನ್ನದುಗಳಿಗೆ ಬೇಸ್ ಪ್ರೈಸ್ ಇಂಡಿ 80 ಲಕ್ಷ, ಇಎಂಡಿ 160000 ನಿಗದಿಪಡಿಸಿರುತ್ತಾರೆ. ಅದರಂತೆ ಸಿಎಲ್-9(ಎ) ಸನ್ನದುಗಳಾದ ವಿಜಯಪುರ VJP39/VIJ7/CL9A/001 2) VJP39/VIJ7/CL.9A/002 GEN ಬೇಸಿಕ್ ಪ್ರೈಸ್ 1.ಕೋಟಿ, EMD-200000 ನಿಗದಿ ಪಡಿಸಿರುತ್ತಾರೆ. ಇವುಗಳ ಹರಾಜು ಪ್ರಕ್ರಿಯೆ ವೇಳಾಪಟ್ಟಿಯನ್ವಯ ಹರಾಜು ಪ್ರಕ್ರಿಯೆ ಕೈಗೊಳ್ಳಲು ಸರ್ಕಾರ ಆದೇಶ ಹೊರಡಿಸಿದೆ ಎಂದು ಅಬಕಾರಿ ಇಲಾಖೆ ಪ್ರಕಟಣೆ ತಿಳಿಸಿದೆ.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR